
## ಯುವ ಸ್ಫೂರ್ತಿ



ನೀವು ಏನು ಭಾವಿಸುತ್ತಿರೋ ಅದೇ ಆಗುತ್ತೀರಿ. ನೀವು ನಿಮ್ಮನ್ನು ದುರ್ಬಲರೆಂದು ಭಾವಿಸಿದರೆ, ನೀವು ದುರ್ಬಲರಾಗುತ್ತೀರಿ. ನೀವು ನಿಮ್ಮನ್ನು ಬಲಶಾಲಿ ಎಂದು ಭಾವಿಸಿದರೆ, ನೀವು ಬಲಶಾಲಿಯಾಗಿ ಇರುತ್ತೀರಿ.
–ಸ್ವಾಮಿ ವಿವೇಕಾನಂದ

MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

YUVA MARGA KANNADA DAILY NEWS PAPER

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ : 185 | ಮಂಗಳವಾರ: 06–05–2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ:2–00

VOLUME: 04 | ISSUE: 185 | TUESDAY: 06–05–2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00


## ಪೆಹಲ್ಗಾಮ್ ಉಗ್ರರ ದಾಳಿ ಪ್ರತೀಕಾರ

### ಪ್ರಧಾನಿ ತೀರ್ಮಾನಕ್ಕೆ ದೇಶದ ಜನತೆ ಬದ್ಧರಾಗಿರಬೇಕು ಎಂದ ಗೌಡರು



**ಹಾಸನ, ಮೇ 6–** ನಮ್ಮ ದೇಶದ 150 ಕೋಟಿ ಜನರು ಏಕಮುಖವಾಗಿ ಪ್ರಧಾನಮಂತ್ರಿಗಳ ತೀರ್ಮಾನಕ್ಕೆ ಬದ್ಧರಾಗಿರಬೇಕು ಎಂದು ಮಾಜಿ ಪ್ರಧಾನಿ ಹಾಗೂ ರಾಜ್ಯಸಭಾ ಸದಸ್ಯ ಹೆಚ್.ಡಿ.ದೇವೇಗೌಡರು ತಿಳಿಸಿದ್ದಾರೆ.

ಹಾಸನ ತಾಲ್ಲೂಕಿನ ದ್ಯಾಪಲಾಪುರ ಗ್ರಾಮಕ್ಕೆ ನಿನ್ನೆ ಹೆಲಿಕಾಪ್ಟರ್‌ನಲ್ಲಿ ಆಗಮಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಗ್ಗಟ್ಟಿದ್ದಾಗ ಮಾತ್ರ ಪಹಲ್ಗಾಮ್‌ನಂತಹ ದುರ್ಘಟನೆ ನಡೆಯುವುದಿಲ್ಲ ಎಂದಿದ್ದಾರೆ.

ಕಾಶ್ಮೀರದ ವಿಚಾರದಲ್ಲಿ ಪ್ರಧಾನಮಂತ್ರಿಗಳು ಬಹಳ ಬಿಗಿಯಾದಂತಹ ಕ್ರಮ ತೆಗೆದುಕೊಂಡಿದ್ದಾರೆ. ಈ ವಿಷಯದಲ್ಲಿ ರಾಷ್ಟ್ರದ ಎಲ್ಲಾ ರಾಜಕೀಯ ಪಕ್ಷಗಳು ಐಕ್ಯತೆಯನ್ನು ತೋರಿಸಿವೆ. 28 ಪ್ರವಾಸಿಗರನ್ನು ನಿಷ್ಕರುಣೆಯಿಂದ ಹತ್ಯೆ ಮಾಡಿದಂತಹ ಉಗ್ರಗಾಮಿಗಳನ್ನು ಸಂಪೂರ್ಣವಾಗಿ ನಾಶ ಮಾಡುವವರೆಗೂ ಪ್ರಧಾನಮಂತ್ರಿಗಳು ಏನೆಲ್ಲಾ ಕ್ರಮ ತೆಗೆದುಕೊಳ್ಳಬೇಕೋ ಅದನ್ನು ತೆಗೆದುಕೊಳ್ಳುತ್ತಿದ್ದಾರೆ ಎಂದು ಅವರು ಹೇಳಿದ್ದಾರೆ.

ಈ ವಿಷಯದಲ್ಲಿ ನನ್ನ ಅನುಭವದಿಂದ ಅಭಿಪ್ರಾಯವನ್ನು ತಿಳಿಸಿದ್ದೇನೆ. ಇದು ಸೂಕ್ಷ್ಮವಾದ ವಿಚಾರ. ಈ ವಿಷಯದಲ್ಲಿ ಏನು ಕ್ರಮ ತೆಗೆದುಕೊಳ್ಳುತ್ತಾರೋ ಅದಕ್ಕೆ ನನ್ನದು, ನನ್ನ ಪಕ್ಷದ್ದು, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಸೇರಿದಂತೆ ನಮ್ಮ ಪೂರ್ಣ ಬೆಂಬಲ ಇದೆ ಎಂದು ಈಗಾಗಲೇ ಹೇಳಿದ್ದೇನೆ.

ಮುಂದೆ ಕೂಡ ಏನು ಕ್ರಮ ತೆಗೆದುಕೊಳ್ಳುತ್ತಾರೋ ಆ ಕ್ರಮಕ್ಕೆ ಇಡೀ ದೇಶ ಪಕ್ಷಭೇದವಿಲ್ಲದೇ ಎಲ್ಲರೂ ಒಗ್ಗಟ್ಟಾಗಿ ಬೆಂಬಲ ನೀಡಬೇಕು. ಮುಂದೆ ಇಂತಹ ದುಷ್ಕೃತ್ಯ ನಡೆಯಬಾರದು. ಅವರಿಗೆ ಪಾಠ ಕಲಿಸಬೇಕು ಎಂದು ಪ್ರಧಾನಮಂತ್ರಿಗಳು ಪ್ರತಿಜ್ಞೆ ಮಾಡಿದ್ದಾರೆ. ಅವರ ಹಿಂದೆ ನಿಲ್ಲುತ್ತೇವೆ. ಮೊದಲು

2ನೇ ಪುಟಕ್ಕೆ

## ಬೆಳಕು ಜ್ಞಾನದ ಸಂಕೇತವಾಗಿದೆ : ಶ್ರೀಶಿವಾಚಾರ್ಯ ಮಹಾಸ್ವಾಮಿಗಳು

ಯುವ ಮಾರ್ಗ ಸುದ್ದಿ

**ಮಾನ್ವಿ,ಮೇ.6–**ಬೆಳಕು ಜ್ಞಾನದ ಸಂಕೇತವಾಗಿದ್ದು ಕತ್ತಲೆಯನ್ನು ಕಳೆದು ಬೆಳಕನ್ನು ನೀಡುತ್ತದೆ ಪ್ರತಿಯೊಬ್ಬರ ಜೀವನದಲ್ಲಿ ಕಷ್ಟಗಳು ಶಾಶ್ವತವಾಗಿರುವುದಿಲ್ಲ ಗುರುವಿನ ಕೃಪೆಯಿಂದ ಕಷ್ಟಗಳು ಕಳೆದು ಜೀವನದಲ್ಲಿ ಮತ್ತೆ ಶಾಂತಿ,ನೆಮ್ಮದಿ, ಸಂತೋಷವನ್ನು ಕಾಣಬಹುದು ಎಂದು ಶ್ರೀ ಮರಿಬ ಸವದೇಶಿ ಕೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳು ತಿಳಿಸಿದರು. ತಾಲೂಕಿನ ಉಟಕನೂರು ಶ್ರೀ ಅಡವಿ ಅಮರೇಶ್ವರ ಮಠದ ಆವರಣದಲ್ಲಿ ಭಾನುವಾರ ರಾತ್ರಿ ನಡೆದ ಲಕ್ಷದೀಪೋತ್ಸವ



ಮಾನ್ವಿ: ತಾಲೂಕಿನ ಉಟಕನೂರು ಗ್ರಾಮದಲ್ಲಿ ಶ್ರೀ ಮರಿಬಸವದೇಶಿಕೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳು ದೀಪ ಬೆಳಗಿಸುವ ಮೂಲಕ ಲಕ್ಷದೀಪೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಚಾಲನೆ ನೀಡಿ ಅರ್ಶೀವಚನ ನೀಡಿದರು. ಉಟಕನೂರು ಸೇರಿದಂತೆ ವಿವಿಧ ಗ್ರಾಮಗಳ ಸಾವಿರಾರು ಭಕ್ತರು ದೀಪಗಳನ್ನು ಬೆಳಗಿಸಿದರು.

## ಮೇ.10 ರಂದು ಮಾನ್ವಿಯಲ್ಲಿ ಸ್ವಾಭಿಮಾನಿ ಮಾದಿಗ ಹೋರಾಟಗಾರರ ಸಮಾವೇಶ




ಯುವ ಮಾರ್ಗ ಸುದ್ದಿ

**ಮಾನ್ವಿ,ಮೇ.6–** ಮಾದಿಗ ಸಮುದಾಯಕ್ಕೆ ಒಳಮೀಸಲಾತಿ ನೀಡುವಂತೆ ಆಗ್ರಹಿಸಿ ಕಳೆದ 35 ವರ್ಷಗಳಿಂದ ಹೋರಾಟ ನಡೆಸಲಾಗುತ್ತಿದೆ. ಆದರೆ ಸರ್ಕಾರವು ಈ ಬೇಡಿಕೆಯನ್ನು ನಿರ್ಲಕ್ಷಿಸುತ್ತಿದೆ ಎಂದು ಒಳಮೀಸಲಾತಿ ಹೋರಾಟ ಸಮಿತಿ ತಾಲೂಕು ಘಟಕದ ಸಂಚಾಲಕರಾದ ಜಯಪ್ರಕಾಶ್ ತಿಳಿಸಿದ್ದಾರೆ.

ರಾಜ್ಯದಲ್ಲಿ ಒಳಮೀಸಲಾತಿ ಜಾರಿಯಾಗುವವರೆಗೂ ಸರ್ಕಾರಿ ಹುದ್ದೆಗಳ ನೇರ ನೇಮಕಾತಿ, ಬ್ಯಾಕ್ ಲಾಗ್ ಮತ್ತು ಮುಂಬಡ್ತಿ ಆದೇಶಗಳನ್ನು ಮಾಡದಂತೆ ಒತ್ತಾಯಿಸಿ ಬಿ. ಆರ್.ಭಾಸ್ಕರ್ ಪ್ರಸಾದ್ ಅವರ ನೇತೃತ್ವದಲ್ಲಿ ಹೊಸ ಪೇಟೆಯಿಂದ ಬೆಂಗಳೂರಿನವರೆಗೆ ಪಾದಯಾತ್ರೆ ಹಾಗೂ ಹೋರಾಟಗಾರರ ರಥಯಾತ್ರೆ ಹಮ್ಮಿಕೊಳ್ಳಲಾಗಿದೆ.

ಈ ಪಾದಯಾತ್ರೆ ಮತ್ತು ರಥಯಾತ್ರೆಯು ಮೇ 10 ರಂದು ಬೆಳಿಗ್ಗೆ 10 ಗಂಟೆಗೆ ಮಾನ್ವಿ ಪಟ್ಟಣಕ್ಕೆ ಆಗಮಿಸಲಿದೆ. ಡಾ. ಅಂಬೇಡ್ಕರ್ ವೃತ್ತದಿಂದ ಮೆರವಣಿಗೆಯ ಮೂಲಕ ಹೋರಾಟಗಾರರನ್ನು ಬರಮಾಡಿಕೊಳ್ಳಲಾಗುವುದು. ನಂತರ ಪಟ್ಟಣದ ಟಿ.ಡಿ.ಪಿ.ಸಿ.ಎಸ್. ಬೈಲು ಜಾಗದಲ್ಲಿ ಸ್ವಾಭಿಮಾನಿ ಮಾದಿಗ ಹೋರಾಟಗಾರರ ಸಮಾವೇಶ ನಡೆಯಲಿದೆ. ಇದೇ ಸಂದರ್ಭದಲ್ಲಿ ಒಳಮೀಸಲಾತಿ ಪ್ರಮಾಣ

2ನೇ ಪುಟಕ್ಕೆ

## ಕನ್ನಡ ನಾಡು ನುಡಿ ಬೆಳಸುವುದು ಪ್ರತಿಯೊಬ್ಬರ ಕರ್ತವ್ಯ



ಯುವ ಮಾರ್ಗ ಸುದ್ದಿ

**ದೇವದುರ್ಗ,ಮೇ.6–**ದೇವದುರ್ಗ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತಿನಿಂದ 111 ನೇ ಕನ್ನಡ ಸಾಹಿತ್ಯ ಪರಿಷತ್ತು ಸಂಸ್ಥಾಪನಾ ದಿನಾಚರಣೆಯನ್ನು ಪಟ್ಟಣದ ಕೊಪ್ಪಳ ಕ್ರಾಸ್ ಬಳಿಯ ಶ್ರೀ ಬಸವ ಪದವಿ ಮಹಾ ವಿದ್ಯಾಲಯದಲ್ಲಿ ಸರಳವಾಗಿ ಆಚರಿಸಲಾಯಿತು.ಕಾರ್ಯಕ್ರಮದ ಆರಂಭದಲ್ಲಿ ತಾಲೂಕ ಗೌರವ ಕೋಶಾಧ್ಯಕ್ಷರಾದ ತಿರುಪತಿ ಸೂಗೂರು ಅವರು ಭುವನೇಶ್ವರಿ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಪೂಜೆ ಸಲ್ಲಿಸಿದರು.ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತಿನ ಸಂಘಟನಾ ಕಾರ್ಯದರ್ಶಿಗಳಾದ ವೇಣುಗೋಪಾಲ್ ಗೌಡ ಪಾಟೀಲ್ ಜಾಲಹಳ್ಳಿ ಅವರು, ಕನ್ನಡವು ನಮ್ಮ ಮಾತೃಭಾಷೆಯಾಗಿದ್ದು, ನಾಡು ನುಡಿ ಬೆಳೆಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದರು. ಕನ್ನಡ ಸಾಹಿತ್ಯ ಪರಿಷತ್ತನ್ನು ಸ್ಥಾಪಿಸಿದ ಶ್ರೀನಾಲ್ವಡಿ ಕೃಷ್ಣರಾಜ ಒಡೆಯರ್ ಹಾಗೂ ಅಂದಿನ ಮೈಸೂರು ರಾಜ್ಯದ ದಿವಾನರಾಗಿದ್ದ ಸರ್ ಎಂ ವಿಶ್ವೇಶ್ವರಯ್ಯ ಮತ್ತು ಸರ್ ಮಿರ್ಜಾ ಇಸ್ಮಾಯಿಲ್ ಅವರ

2ನೇ ಪುಟಕ್ಕೆ

## ತಾಲೂಕು ಪಂಚಾಯಿತಿಯಲ್ಲಿ ಪ್ರಗತಿ ಪರಿಶೀಲನಾ ಸಭೆ



ಯುವ ಮಾರ್ಗ ಸುದ್ದಿ

**ದೇವದುರ್ಗ, ಮೇ.6–**ದೇವದುರ್ಗ ತಾಲೂಕು ಪಂಚಾಯಿತಿಯಲ್ಲಿ ಸೋಮವಾರ ಕಾರ್ಯನಿರ್ವಾಹಕ ಅಧಿಕಾರಿ ಬಸವರಾಜ್ ಅವರ ಅಧ್ಯಕ್ಷತೆಯಲ್ಲಿ ಪ್ರಗತಿ ಪರಿಶೀಲನಾ ಸಭೆ ನಡೆಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಪಂಚಾಯತ್ ರಾಜ್ ಸಹಾಯಕ ನಿರ್ದೇಶಕಿ ಮಹೇಶ್ವರಿ ಅವರು, ಮುಂಬರುವ ದಿನಗಳಲ್ಲಿ ಕೈಗೊಳ್ಳಬೇಕಾದ ಕಾರ್ಯಗಳ ಕುರಿತು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಅದರಂತೆ, ತಾಲೂಕಿನ 33 ಗ್ರಾಮ ಪಂಚಾಯಿತಿಗಳಲ್ಲಿ ಕಡ್ಡಾಯವಾಗಿ ಮಹಿಳಾ ಗ್ರಾಮ ಸಭೆಗಳನ್ನು ನಡೆಸಬೇಕು, ಬಾಕಿ ಇರುವ ಜೇಸ್ಕಮ್ ಹಣವನ್ನು ಕೂಡಲೇ ಪಾವತಿಸಬೇಕು ಎಂದು ಸೂಚಿಸಿದರು.

ವಸತಿ ಯೋಜನೆಯ ಸಮೀಕ್ಷೆಯು ಮೇ 15 ರವರೆಗೆ ನಡೆಯಲಿದ್ದು, ಯಾವುದೇ ಅರ್ಹ ಮನೆಗಳು ಸಮೀಕ್ಷೆಯಿಂದ ಹೊರಗುಳಿಯದಂತೆ ನೋಡಿಕೊಳ್ಳಲು ಸೂಚನೆ ನೀಡಿದರು. ಪ್ರತಿದಿನ ತೆರಿಗೆ ವಸೂಲಿ ಮಾಡಬೇಕು, ಸಕಾಲದಲ್ಲಿ ಬಂದ

2ನೇ ಪುಟಕ್ಕೆ

## ಒಳ ಮೀಸಲು; ಜಿಲ್ಲಾ, ತಾಲೂಕು ಮಟ್ಟದ ಕಂಟ್ರೋಲ್ ರೂಂಗೆ ನೋಡಲ್ ಅಧಿಕಾರಿಗಳ ನೇಮಕ

**ರಾಯಚೂರು.ಮೇ.6–** ಪರಿಶಿಷ್ಟ ಜಾತಿ ಒಳ ಮೀಸಲಾತಿ ಕುರಿತಂತೆ ಗೌರವಾನ್ವಿತ ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನ್ ದಾಸ್ ಅವರ ಏಕ ಸದಸ್ಯ ವಿಚಾರಣಾ ಆಯೋಗದಿಂದ ಪರಿಶಿಷ್ಟ ಜಾತಿಗಳ ವಿವಿಧ ಅಂಶಗಳ ಬಗ್ಗೆ ದತ್ತಾಂಶಗಳನ್ನು ಶೇಖರಿಸಲು ಸಮೀಕ್ಷೆಯನ್ನು ನಡೆಸಲು ತೀರ್ಮಾನಿಸಿ ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಕಂಟ್ರೋಲ್ ರೂಂ ಮತ್ತು ನೋಡಲ್ ಅಧಿಕಾರಿಗಳನ್ನು ನೇಮಿಸಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ.ಆದೇಶ ಹೊರಡಿಸಿದ್ದಾರೆ. ರಾಯಚೂರು ಜಿಲ್ಲಾ ಮಟ್ಟದ ಕಂಟ್ರೋಲ್ ರೂಂಗೆ ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ರವಿ ಅವರನ್ನು (ದೂರವಾಣಿ ಸಂ:7892886923)ನೋಡಲ್ ಅಧಿಕಾರಿ ಎಂದು ನೇಮಿಸಲಾಗಿದೆ. ಅದೇ ರೀತಿ ತಾಲೂಕುವಾರು ರಾಯಚೂರು ತಾಲೂಕಿಗೆ ಯರಗೇರಾ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಂಶುಪಾಲರಾದ ಕೊಟ್ರೇಶ (ಮೊ ;7019911842), ಮಾನ್ವಿ ತಾಲೂಕಿಗೆ ಹಿರೇಕೊಟ್ನೆಕಲ್ ಡಾ.ಬಿ.ಆರ್.ಅಂಬೇಡ್ಕರ್ ವಸತಿ ಶಾಲೆಯ ಪ್ರಾಂಶುಪಾಲರಾದ ಸಿದ್ದರಾಮಪ್ಪ (ಮೊ.ಸಂ: 9980873021), ಸಿಂಧನೂರು ತಾಲೂಕಿಗೆ ಸಿಂಧನೂರಿನ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯಪ್ರಾಂಶುಪಾಲರಾದ ಹೇಮಣ್ಣ ಪಂಪಣ್ಣನವರ್ (ಮೊ.ಸಂ: 9686127615), ಲಿಂಗಸುಗೂರು ತಾಲೂಕಿಗೆ ಮೊರಾರ್ಜಿ ದೇಸಾಯಿ ವಸತಿ ಶಾಲೆಯ (ಬಿಸಿಎಂ) ಪ್ರಾಂಶುಪಾಲರಾದ ಸಂಗಮೇಶ ಕೊಳ್ಳಿ (ಮೊ.ಸಂ:9880005224) ಹಾಗೂ ದೇವದುರ್ಗ ತಾಲೂಕಿಗೆ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯ ಪ್ರಾಂಶುಪಾಲರಾದ ರಂಗಪ್ಪ (ಮೊ.9611072820)ಅವರನ್ನು ನೋಡಲ್ ಅಧಿಕಾರಿಗಳೆಂದು ನೇಮಿಸಲಾಗಿದೆ. ನೋಡಲ್ ಅಧಿಕಾರಿಗಳು ತಮ್ಮೊಂದಿಗೆ ತಮ್ಮ ಕಚೇರಿಯ ಆಪರೇಟರ್ ತಮ್ಮ ಜೊತೆಯಲ್ಲಿ ಇರುವಂತೆ ನೋಡಿಕೊಳ್ಳುವುದು ಮತ್ತು ಗಣತಿದಾರರು ಮತ್ತು ಸಾರ್ವಜನಿಕರಿಂದ ಬರುವ ಕರೆಗಳಿಗೆ ಸೂಕ್ತ ಮತ್ತು ಸಮಜಾಯಿಷಿ ಮಾಹಿತಿ ನೀಡುವುದು ಹಾಗೂ ಪ್ರತಿದಿನ ಸಮಾಜ ಕಲ್ಯಾಣ ಇಲಾಖೆಯ ಕೇಂದ್ರ ಕಚೇರಿಯ ಕಂಟ್ರೋಲ್ ರೂಂಗೆ ಮಾಹಿತಿ ನೀಡುವಂತೆ ನೋಡಲ್ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳುಆದೇಶಿಸಿದ್ದಾರೆ.

## ಈಚನಾಳ:ಮನೆ ಮನೆಗೆ ಮಹಾಂತ ಜೋಳಿಗೆ ಸಂಚಾರ

## ದುಶ್ಚಟಗಳಿಂದ ಜೀವನ ನಾಶ : ಗುರು ಮಹಾಂತ ಸ್ವಾಮಿ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಮೇ.6–** ದೂಮಪಾನ ಮತ್ತು ಮದ್ಯಪಾನದಂತಹ ದುಶ್ಚಟಗಳು ಮನುಷ್ಯನ ಜೀವನ ನಾಶದ ಜೊತೆಗೆ ಸಮಾಜದ ಮೇಲೂ ದುಷ್ಪರಿಣಾಮ ಬೀರಿ ಸಮಾಜದ ಸ್ವಾಸ್ಥ್ಯ ಹಾಳಾಗುತ್ತಿದೆ ಎಂದು ಇಳಕಲ್ ವಿಜಯ ಮಹಾಂತೇಶ್ವರ ಸಂಸ್ಥಾನ ಮಠದ ಪೀಠಾಧಿಪತಿ ಗುರು ಮಹಾಂತ ಸ್ವಾಮೀಜಿ ಕಳವಳ ವ್ಯಕ್ತಪಡಿಸಿದರು.

ತಾಲೂಕಿನ ಸಮೀಪದ ಈಚನಾಳ ಗ್ರಾಮದಲ್ಲಿ ಮಹಾಂತ ಜೋಳಿಗೆ ಜಾಗೃತಿ ಪಾದಯಾತ್ರೆ ಕಾರ್ಯಕ್ರಮದ ಪ್ರಯುಕ್ತ ಗ್ರಾಮದ ವಿವಿಧ ಓಣಿಗಳಲ್ಲಿ, ಕರಡಕಲ್ ಗ್ರಾಮದ ಬಸವೇಶ್ವರ ಮತ್ತು ವಿಜಯ ಮಹಾಂತೇಶ್ವರ ಭಕ್ತ ಬಳಗದವರ ಸಹಯೋಗದಲ್ಲಿ, ಭಜನಾ ಮೇಳ ದೊಂದಿಗೆ ಜೋಳಿಗೆ ಹಿಡಿದು ಸಂಚರಿಸಿದ ಸ್ವಾಮೀಜಿಗಳು, ದುಶ್ಚಟಗಳನ್ನು ಜೋಳಿಗೆಗೆ ಹಾಕಿ ನೆಮ್ಮದಿಯ ಜೀವನ ನಡೆಸುವಂತೆ ಗ್ರಾಮಸ್ಥರಿಗೆ ಸಲಹೆ ನೀಡಿದರು.

ನಂತರ ಬಹಿರಂಗ ವೇದಿಕೆ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು ಪ್ರಸ್ತುತ ದಿನಗಳಲ್ಲಿ ಬಹುತೇಕ ಜನರು ದೂಮಪಾನ,ಮದ್ಯಪಾನ ಗಳಂತಹ ದುಶ್ಚಟಗಳಿಗೆ ಬಲಿಯಾಗಿ ಜೀವನ ಹಾಳು ಮಾಡಿಕೊಳ್ಳುತ್ತಿರುವುದು ಬೇಸರದ ಸಂಗತಿ,ಯುವಕರಿಗೆ ದುಶ್ಚಟಗಳಿಂದ ಮನೆ ಹಾಳಾಗುತ್ತಿದೆ,ಕ್ಯಾನ್ಸರ್ ನಂತಹ ರೋಗಗಳು ಹರಡುತ್ತಿವೆ ಎಂಬ ಪ್ರಜ್ಞೆಯಿಲ್ಲದೆ ಜೀವನ ಹಾಳು ಮಾಡಿಕೊಳ್ಳುತ್ತಿದ್ದಾರೆ. ದೇವರು ಜೀವ ಕೊಡುತ್ತಾನೆ ಆದರೆ ಜೀವನ ಕಟ್ಟಿಕೊಳ್ಳುವುದು ನಮ್ಮ ಕೈಯಲ್ಲಿದೆ, ಗುಟ್ಕಾ ತಯಾರಿಸಿದ ಕಂಪನಿಯವರು ಕೋಟ್ಯಾಧಿಪತಿ,ಗುಟ್ಕಾ ತಿಂದವ ಭಿಕ್ಷಾ ಧೀಶ ಆಗುತ್ತಿದ್ದಾರೆ,



ಲಿಂಗಸುಗೂರು:ಈಚನಾಳ ಗ್ರಾಮದಲ್ಲಿ ಬಹಿರಂಗ ವೇದಿಕೆ ಕಾರ್ಯಕ್ರಮ ಉದ್ದೇಶಿಸಿ ಇಳಕಲ್ ವಿಜಯ ಮಹಾಂತೇಶ್ವರ ಸಂಸ್ಥಾನ ಮಠದ ಪೀಠಾಧಿಪತಿ ಗುರುಮಹಾಂತ ಸ್ವಾಮಿ ಮಾತನಾಡಿದರು.

ಯುವ ಪೀಳಿಗೆ ಜಾಗೃತರಾಗಿ ದುಶ್ಚಟಗಳಿಂದ ಮುಕ್ತರಾಗಿ ಸದೃಡ ಸಮಾಜ ನಿರ್ಮಾಣದತ್ತ ಹೆಜ್ಜೆ ಹಾಕಬೇಕು, ಜೊತೆಗೆ ಮೌಢ್ಯ ,ಕಂದಾಚಾರ ಗಳನ್ನು ನಂಬದೇ ಅವುಗಳನ್ನು ದಿಕ್ಕರಿಸಿ, ವೈಜ್ಞಾನಿಕ ವೈಚಾರಿಕ ನೆಲೆಗಟ್ಟಿನಲ್ಲಿ ನಮ್ಮ ಬದುಕನ್ನು ಕಟ್ಟಿಕೊಂಡು, ವ್ಯಸನ ಗಳನ್ನು ತ್ಯಜಿಸಿ ಸ್ವಾಸ್ಥ್ಯ ಸಮಾಜ ನಿರ್ಮಾಣ ಕ್ಕೆ ಶ್ರಮಿಸೋಣ ಎಂದು ಕರೆ ನೀಡಿ, ಪ್ರತಿಜ್ಞಾ ವಿಧಿ ಬೋಧಿಸಿದರು.

ಈ ಸಂಧರ್ಭದಲ್ಲಿ ಪಿಕಾರ್ಡ್ ಬ್ಯಾಂಕ್ ಅಧ್ಯಕ್ಷರಾದ ಬಸನಗೌಡ ಮೇಟಿ,ನಗರ ಯೋಜನಾ ಪ್ರಾದಿಕಾರದ ಅಧ್ಯಕ್ಷರಾದ ಭೂಪನಗೌಡ ಕರಡಕಲ್,ಬಸನಗೌಡ ಪಾಟೀಲ್,ಗಿರಿಮಲ್ಲನಗೌಡ ಕರಡಕಲ್,ಅಮರಪ್ಪ ಗಡ್ಡಿ,ಪೀರಸಾಬ್ ಪಂಚಮ್,ಮುದುಕಪ್ಪ ಗೌಡ ಮೂಲಿಮನಿ,ಆದಪ್ಪ ಎನ್ ಮೇಟಿ,ವೆಂಕನಗೌಡ ಮೇಟಿ,ಶಿವಪ್ಪ ಹಡಪದ,ಅಮರೇಶ ಪೂಜಾರಿ,ಅಮರೇಶ ಜಿ ಮೇಟಿ,ಮುದುಕಪ್ಪ ಕುಂಬಾರ,ಸಂಗಪ್ಪ ಹಳ್ಳಿ,ಯಮನಪ್ಪ ಕಟ್ಟಿಮನಿ,ಕುಮಾರಸ್ವಾಮಿ ಹಿರೇಮಠ,ದೇವರೆಡ್ಡಿ ಮೇಟಿ,ರಮೇಶ ಚಿಗರಿ,ಸಹದೇವಪ್ಪ ಕರಡಿ ,ಬಸವರಾಜ ಕುಂಬಾರ,ಮಸ್ತಾನ್ ಅಲಿ,ಸೇರಿದಂತೆ ಈಚನಾಳ ಹಾಗೂ ಕರಡಕಲ್ ಗ್ರಾಮದ ಬಸವ ಮತ್ತು ವಿಜಯ ಮಹಾಂತೇಶ್ವರ ಭಕ್ತ ಬಳಗದವರು ಹಾಜರಿದ್ದರು.

ಯುವ ಮಾರ್ಗ

ಮಂಗಳವಾರ: 06–05–2025

## ಮೊದಲನೇಯ ಪುಟದಿಂದ

### ಪ್ರಧಾನಿ ತೀರ್ಮಾನಕ್ಕೆ ದೇಶದ ಜನತೆ ಬದ್ಧರಾಗಿರಬೇಕು ಎಂದ ಗೌಡರು

ಕಾಂಗ್ರೆಸ್ ನಾಯಕರು ಸಹಮತವನ್ನು ವ್ಯಕ್ತಪಡಿಸಿದ್ದರು. ಮಧ್ಯೆ ಸ್ವಲ್ಪ ಒಡಕು ಶಬ್ದ ಬಂದ ಮೇಲೆ ಪುನಃ ಅವರು ಈ ವಿಷಯದಲ್ಲಿ ಐಕ್ಯತೆ ಬಗ್ಗೆ ಪುನಃ ಪ್ರತಿಪಾದನೆ ಮಾಡಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ಹಾಸನ ತಾಲ್ಲೂಕಿನ ದ್ಯಾಪಲಾಪುರ ಗ್ರಾಮಕ್ಕೆ ಹೆಲಿಕಾಪ್ಟರ್‌ನಲ್ಲಿ ಆಗಮಿಸಿದ ಗೌಡರು. ಶ್ರೀ ಆಂಜನೇಯಸ್ವಾಮಿ ದೇವಾಲಯ ಉದ್ಘಾಟನಾ ಮಹೋತ್ಸವ ಹಾಗೂ ಮಹಾಕುಂಭಾಭಿಷೇಕ ಕಾರ್ಯಕ್ರಮದಲ್ಲಿ ಭಾಗವಹಿಸಿದರು. ಮಾಜಿ ಸಚಿವ ಎಚ್.ಡಿ.ರೇವಣ್ಣ, ಶಾಸಕ ಎಚ್.ಪಿ.ಸ್ವರೂಪ್ ಪ್ರಕಾಶ್ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

### ಕನ್ನಡ ನಾಡು ನುಡಿ ಬೆಳಸುವುದು ಪ್ರತಿಯೊಬ್ಬರ ಕರ್ತವ್ಯ

ಕೊಡುಗೆಯನ್ನು ಸ್ಮರಿಸಿದರು. ನಾಡು ನುಡಿ ಮತ್ತು ಭಾಷೆಯ ಸ್ವಾಭಿಮಾನಕ್ಕೆ ಧಕ್ಕೆಯಾದಾಗ ಕನ್ನಡಿಗರೆಲ್ಲರೂ ಒಂದಾಗಬೇಕೆಂದು ಅವರು ಅಭಿಪ್ರಾಯಪಟ್ಟರು.

ಪ್ರಗತಿಪರ ಹೋರಾಟಗಾರರು ಹಾಗೂ ಚಿಂತಕರಾದ ಜಿಲ್ಲಾ ಎಂ ಆರ್ ಎಚ್ ಎಸ್ ಅಧ್ಯಕ್ಷರಾದ ಹನುಮಂತಪ್ಪ ಮನ್ನಾಪುರ್ ಮಾತನಾಡಿ, ವಿದ್ಯಾರ್ಥಿಗಳು ಶಾಲಾ ದಿನಗಳಲ್ಲಿ ಕನ್ನಡ ಭಾಷಾ ಶಿಕ್ಷಣಕ್ಕೆ ಹೆಚ್ಚಿನ ಆಸಕ್ತಿ ವಹಿಸಬೇಕು. ಜ್ಞಾನಪೀಠ ಪ್ರಶಸ್ತಿ ವಿಜೇತರಾದ ಕುವೆಂಪು ಹಾಗೂ ಶಿವರಾಮ ಕಾರಂತರನ್ನು ಸ್ಮರಿಸುವುದು ಅಗತ್ಯ ಎಂದರು. ದೇವದುರ್ಗ ತಾಲೂಕಿನಲ್ಲಿ 2010 ರಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಆಯೋಜಿಸಲಾಗಿದ್ದು, ಮುಂದಿನ ದಿನಗಳಲ್ಲಿ ಇಂತಹ ಸಾಹಿತ್ಯ ಚಟುವಟಿಕೆಗಳು ಮತ್ತು ಸಮ್ಮೇಳನಗಳನ್ನು ಹೆಚ್ಚಾಗಿ ನಡೆಸಲು ಕ್ರಿಯಾ ಯೋಜನೆ ರೂಪಿಸಬೇಕೆಂದು ಅವರು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎಚ್. ಶಿವರಾಜ್ ಅವರು ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ತು ಸಮಸ್ತ ಕನ್ನಡಿಗರ ಸ್ವಾಭಿಮಾನದ ಸಂಕೇತವಾಗಿದೆ. ಇಲ್ಲಿಯವರೆಗೆ ಪರಿಷತ್ತಿನಿಂದ 87 ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಗಳನ್ನು ನಡೆಸಲಾಗಿದೆ. ನಾಡು ನುಡಿ ಸಾಹಿತ್ಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದವರಿಗೆ ಪರಿಷತ್ತಿನಿಂದ ದತ್ತಿ ಪ್ರಶಸ್ತಿಗಳನ್ನು ನೀಡಲಾಗುತ್ತಿದೆ. ಕಲೆ, ಸಾಹಿತ್ಯ, ಸಂಗೀತ, ಜಾನಪದ, ನಾಟಕ ರಂಗಭೂಮಿ ಒಳಗೊಂಡ ಕನ್ನಡ ಸಾಹಿತ್ಯ ಪರಿಷತ್ತು ಏಳು ಕೋಟಿ ಕನ್ನಡಿಗರ ಆಸ್ತಿಯಾಗಿದೆ. ಸರ್ಕಾರ ಕನ್ನಡ ಭಾಷೆಗೆ ಹೆಚ್ಚಿನ ಆದ್ಯತೆ ನೀಡಿ ಕನ್ನಡ ಶಾಲೆಗಳನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಹೊಂದಿದೆ. ವಿದ್ಯಾರ್ಥಿಗಳು ಮಾತೃಭಾಷೆಯಲ್ಲಿ ಶಿಕ್ಷಣ ಪಡೆದು ಉನ್ನತ ಹುದ್ದೆಗಳನ್ನು ಅಲಂಕರಿಸಬೇಕು ಎಂದು ಅವರು ಆಶಿಸಿದರು.

ಈ ಸಂದರ್ಭದಲ್ಲಿ ವಿದ್ಯಾ ಸಂಸ್ಥೆಯ ಪ್ರಾಚಾರ್ಯ ಶಾಮ್ ಸುಂದರ್, ಉಪನ್ಯಾಸಕ ನಿತೀಶ್ ಕುಮಾರ್, ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಸಹ ಕಾರ್ಯದರ್ಶಿ ಶಿವರಾಜ್ ರುದ್ರಾಕ್ಷಿ ಸ್ವಾಗತಿಸಿದರು. ಶಿವರಾಜ್ ಅಮರಾಪುರ್ ವಂದಿಸಿದರು. ಕಾರ್ಯಕ್ರಮದಲ್ಲಿ ವಿದ್ಯಾಸಂಸ್ಥೆಯ ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಕನ್ನಡ ಅಭಿಮಾನಿಗಳು ಪಾಲ್ಗೊಂಡಿದ್ದರು.

### ಸ್ವಾಭಿಮಾನಿ ಮಾದಿಗ ಹೋರಾಟಗಾರರ ಸಮಾವೇಶ

ಪತ್ರಗಳನ್ನು ವಿತರಿಸಲಾಗುವುದು.ನಿವೃತ್ತ ನ್ಯಾಯಮೂರ್ತಿ ಎಚ್.ಎಸ್. ನಾಗಮೋಹನದಾಸ್ ನೇತೃತ್ವದ ಆಯೋಗವು ಮೇ 5 ರಿಂದ 17 ರವರೆಗೆ ಪರಿಶಿಷ್ಟ ಜಾತಿಗಳ ಸಮೀಕ್ಷೆಯನ್ನು ನಡೆಸಲಿದ್ದು, 101 ಪರಿಶಿಷ್ಟ ಜಾತಿಗಳ ಪಟ್ಟಿಯ ಕ್ರಮ ಸಂಖ್ಯೆ 61 ರಲ್ಲಿ ಬೇರೆ ಉಪಜಾತಿಗಳನ್ನು ಬರೆಯದೆ ಹಿಂದುಳಿದ ಮಾದಿಗ ಎಂದು ಮಾತ್ರ ಬರೆಯಬೇಕು ಎಂದು ಜಯಪ್ರಕಾಶ್ ಮನವಿ ಮಾಡಿದರು.

ಮೇ 7 ರಂದು ರಾಯಚೂರು ನಗರಕ್ಕೆ ಆಗಮಿಸಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೂ ಒಳಮೀಸಲಾತಿ ಜಾರಿಯಾಗುವವರೆಗೂ ಸರ್ಕಾರಿ ಹುದ್ದೆಗಳ ನೇರ ನೇಮಕಾತಿ, ಬ್ಯಾಕ್ ಲಾಗ್ ಮತ್ತು ಮುಂಬಡ್ತಿ ಆದೇಶಗಳನ್ನು ಮಾಡದಂತೆ ಒತ್ತಾಯಿಸಲಾಗುವುದು ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಸಮಾಜದ ಮುಖಂಡರಾದ ಮೂಕಪ್ಪ ಕಟ್ಟಿಮನಿ, ಸುಂದರ್ ಕಪಗಲ್, ಪಿ.ರವಿಕುಮಾರ್ ವಕೀಲರು, ಯಲ್ಲಪ್ಪ ಬಾದರದಿನ್ನಿ, ತಾಯಪ್ಪ ಬಿ.ಹೊಸೂರು, ಪ್ರಭುರಾಜ ಕೊಡ್ಲಿ, ಹನುಮಂತಪ್ಪ ಕೋಟೆ, ಗಣೇಶ್ ಸಂಗಾಪುರ್, ಯಲ್ಲಪ್ಪ ಸೀಕಲ್, ಪ್ರದೀಪ್ ಕಪಗಲ್, ಯೇಸು ಸೇರಿದಂತೆ ಇತರರು ಉಪಸ್ಥಿತರಿದ್ದರು.

### ತಾಲೂಕು ಪಂಚಾಯಿತಿಯಲ್ಲಿ ಪ್ರಗತಿ ಪರಿಶೀಲನಾ ಸಭೆ

ಅರ್ಜಿಗಳನ್ನು ವಿಲೇವಾರಿ ಮಾಡಬೇಕು ಮತ್ತು ಪ್ರತಿ ತಿಂಗಳು ಸಾಮಾನ್ಯ ಸಭೆಯನ್ನು ಕಡ್ಡಾಯವಾಗಿ ನಡೆಸಬೇಕು. ಈ ಎಲ್ಲಾ ಮಾಹಿತಿಯನ್ನು ಪಂಚತಂತ್ರ ತಂತ್ರಾಂಶದಲ್ಲಿ ದಾಖಲಿಸಬೇಕು ಎಂದು ತಿಳಿಸಿದರು.ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ಕೈಗೊಳ್ಳಲಾದ ಕಾಮಗಾರಿಗಳ ಆದೇಶ ಮತ್ತು ಪಾವತಿ ಪ್ರಕ್ರಿಯೆಗಳನ್ನು ತ್ವರಿತಗೊಳಿಸಬೇಕು. ಕಸ ಸಂಗ್ರಹಣೆ ಮತ್ತು ವಿಂಗಡಣೆ ಮಾಡುವ ವಾಹನಗಳ ವಿಮೆ ಹಾಗೂ ಚಾಲಕರ ಗೌರವಧನವನ್ನು ಕೂಡಲೇ ಪಾವತಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೇ ತಿಂಗಳ 24 ಮತ್ತು 25 ರಂದು ಗ್ರಾಮ ಪಂಚಾಯಿತಿಗಳಿಗೆ ರಾಜ್ಯ ಮಟ್ಟದ ತಂಡವು ಭೇಟಿ ನೀಡಲಿದ್ದು, ಈ ಹಿನ್ನೆಲೆಯಲ್ಲಿ ಎಲ್ಲಾ ದಾಖಲೆಗಳನ್ನು ಸಿದ್ಧವಾಗಿಟ್ಟುಕೊಳ್ಳಬೇಕು. ಕಡ್ಡಾಯವಾಗಿ 7 ರಿಜಿಸ್ಟರ್‌ಗಳನ್ನು ವ್ಯವಸ್ಥಿತವಾಗಿ ನಿರ್ವಹಿಸಬೇಕು. ನರೇಗಾ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಕೂಲಿ ಕಾರ್ಮಿಕರ ಹಾಜರಾತಿಯನ್ನು ಎನ್.ಎಂ.ಎಂ.ಎಸ್ ಆಪ್‌ನಲ್ಲಿ ದಿನಕ್ಕೆ ಎರಡು ಬಾರಿ ಕಡ್ಡಾಯವಾಗಿ ನಮೂದಿಸಬೇಕು. ತಪ್ಪಿದಲ್ಲಿ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಮಹೇಶ್ವರಿ ಅವರು ಎಚ್ಚರಿಕೆ ನೀಡಿದರು.

ಈ ಸಭೆಯಲ್ಲಿ ಕರ್ನಾಟಕ ರಾಜ್ಯ ಗ್ರಾಮ ಪಂಚಾಯಿತಿ ನೌಕರರ ಸಂಘವು ತಮ್ಮ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಮನವಿ ಸಲ್ಲಿಸಿತು.ಸಭೆಯ ಅಧ್ಯಕ್ಷತೆ ವಹಿಸಿದ್ದ ಕಾರ್ಯನಿರ್ವಾಹಕ ಅಧಿಕಾರಿಗಳು, ನೌಕರರ ಮನವಿಗಳನ್ನು ಆಲಿಸಿ, ಅವುಗಳನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

ಈ ಪ್ರಗತಿ ಪರಿಶೀಲನಾ ಸಭೆಯಲ್ಲಿ ವಿವಿಧ ಗ್ರಾಮ ಪಂಚಾಯಿತಿಗಳ ಅಭಿವೃದ್ಧಿ ಅಧಿಕಾರಿಗಳು, ತಾಲೂಕು ಪಂಚಾಯಿತಿ ಸಿಬ್ಬಂದಿ ಮತ್ತು ಸಿ.ಐ.ಟಿ.ಯು ಸಂಘಟನೆಯ ಗಿರಿಯಪ್ಪ ಪೂಜಾರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಜೆಸ್ಕಾಂ ಗ್ರಾಹಕರ ಕುಂದು ಕೊರತೆ ತ್ರೈಮಾಸಿಕ ಸಭೆ

ಯುವ ಮಾರ್ಗ ಸುದ್ದಿ

**ರಾಯಚೂರು,ಮೇ.6–** ಜಿಲ್ಲೆಯ ವಿವಿಧ ತಾಲ್ಲೂಕಿನ ಜೆಸ್ಕಾಂ ಉಪ–ವಿಭಾಗಗಳ ಕಚೇರಿಯಲ್ಲಿ ಜೆಸ್ಕಾಂ ವೃತ್ತ ಕಾರ್ಯ ಮತ್ತು ಪಾಲನೆ ಅಧೀಕ್ಷಕ ಅಭಿಯಂತರರ ಅಧ್ಯಕ್ಷತೆಯಲ್ಲಿ ಗ್ರಾಹಕರ ಕುಂದು ಕೊರೆತೆ ತ್ರೈಮಾಸಿಕ ಸಭೆ ಏರ್ಪಡಿಸಲಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಹಕರು ಹಾಜರಾಗಿ ಸಭೆಯನ್ನು ಯಶಸ್ವಿ ಗೊಳಿಸುವಂತೆ ಕೋರಲಾಗಿದೆ.

ಮೇ.16ರಂದು ದೇವದುರ್ಗ, ಮೇ.17ರಂದು ಮಾನ್ವಿ ಹಾಗೂ ಮೇ.19ರಂದು ರಾಯಚೂರು ನಗರ ಉಪ ವಿಭಾಗ–2ರಲ್ಲಿ ಗ್ರಾಹಕರ ಕುಂದು ಕೊರೆತೆ ತ್ರೈಮಾಸಿಕ ಸಭೆಯನ್ನು ಹಮ್ಮಿಕೊ ಳ್ಳಲಾಗಿದ್ದು, ಈ ಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಹಕರು ಹಾಜರಾಗಿ ತಮ್ಮ ಕುಂದು ಕೊರತೆಗಳನ್ನು ನಿವಾರಿಸಿಕೊಳ್ಳುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಕಸ್ಮಿಕ ಬೆಂಕಿ : ಹತ್ತು ಕುರಿ, ಟ್ರ್ಯಾಕ್ಟರ್ ಭಸ್ಮ



**ಇಂಡಿ,ಮೇ.6 :** ತಾಲೂಕಿನ ಸಾಲೋಟಗಿ ಗ್ರಾಮದ ಅಪ್ಪಣ್ಣ ಸೋಮಣ್ಣ ದೊಡ್ಡಿ ಮನೆಗೆ ಆಕಸ್ಮಿಕ ಬೆಂಕಿ ಶನಿವಾರ ಬೆಳಗ್ಗೆ 7.30 ಕ್ಕೆ ತಗುಲಿದೆ. ಗುಡಿಸಲಿನಲ್ಲಿದ್ದ ಹತ್ತು ಕುರಿ ಮತ್ತು ಒಂದು ಟ್ರಾಕ್ಟರ, ದ್ರಾಕ್ಷಿ ಬೆಳೆಯ ಔಷಧಿಗಳು, ಹಾಗೂ ದವಸ ಧಾನ್ಯಗಳು ಸುಟ್ಟು ಭಸ್ಮಗೊಂಡಿದೆ.ಸ್ಥಳಕ್ಕೆ ಹಿರಿಯ ಪಶು ವೈದ್ಯಾಧಿಕಾರಿ ಡಾ. ರಾಜಕುಮಾರ ಅಡಕಿ ಮತ್ತು ಸಾಲೋಟಗಿ ಪಶು ವೈದ್ಯಾಧಿಕಾರಿ ಲಕ್ಷಿಕಾಂತ ಕಟ್ಟಿಮನಿ ಭೇಟಿ ನೀಡಿದ್ದಾರೆ.ಕುರಿಗಳು ಅಂದಾಜು ಒಂದು ಲಕ್ಷ ಇಪ್ಪತ್ತು ಸಾವಿರ ಮತ್ತು ಟ್ರಾಕ್ಟರ 5 ಲಕ್ಷ ರೂ ನಷ್ಟವಾಗಿದೆ. ಗ್ರಾಮ ಲೆಕ್ಕಾಧಿಕಾರಿ ಎಂ.ಆರ್.ರಾಠೋಡ ಸ್ಥಳಕ್ಕೆ ಭೇಟಿ ನೀಡಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ:
9743497111, 9743496111

## ಬಿ.ವಿ.ಎ ಪದವಿ ಪ್ರವೇಶಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

ಯುವ ಮಾರ್ಗ ಸುದ್ದಿ

**ರಾಯಚೂರು,ಮೇ.6–** ಮೈಸೂರಿನ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜ್ ವತಿಯಿಂದ 2025–26ನೇ ಶೈಕ್ಷಣಿಕ ಸಾಲಿನ ವರ್ಷದ ಪ್ರಥಮ ಬಿ.ವಿ.ಎ ಪದವಿ ತರಗತಿಗಳ ಪ್ರವೇಶಾತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಮೈಸೂರು ವಿಶ್ವವಿದ್ಯಾನಲಯಕ್ಕೆ ಸಂಯೋಜನೆಗೊಂಡಿರುವ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು (ಕಾವಾ), ಸಿದ್ದಾರ್ಥನಗರ, ಮೈಸೂರು ಸಂಸ್ಥೆಯಲ್ಲಿ ಬ್ಯಾಚುಲರ್ ಆಫ್ ವಿಜ್ಯುಯಲ್ ಆರ್ಟ್ಸ್ (ಬಿ.ವಿ.ಎ) ನಾಲ್ಕು ವರ್ಷದ ಎಂಟು ಸೆಮಿಸ್ಟರ್ ಎನ್.ಇ.ಪಿ. ಪದ್ದತಿ. ಈ ಪದವಿಯಲ್ಲಿ 3 ನೇ ಸೆಮಿಸ್ಟರ್‌ನಂದ ಚಿತ್ರಕಲೆ, ಶಿಲ್ಪಕಲೆ, ಗ್ರಾಫಿಕ್ಸ್ ಕಲೆ (ಅಚ್ಚುಕಲೆ), ಅನ್ವಯಕಲೆ, ಕಲಾ ಇತಿಹಾಸ ಹಾಗೂ ಛಾಯಾಚಿತ್ರ ಮತ್ತು ಛಾಯಚಿತ್ರ ಪತ್ರಿಕೋದ್ಯಮ ವಿಭಾಗಳಲ್ಲಿ ವಿಶೇಳ ಅಧ್ಯಯನದ ಸ್ನಾತಕ ಪದವಿಯಾಗಿರುತ್ತದೆ.

ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸರ್ಕಾರದ ಅಂತರ್ಜಾಲ ವಿಳಾಸ: https://uucms.karnataka.gov.in ಅಥವಾ https://www.cavamysore.karnataka.gov.in ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಪ್ರವೇಶಾತಿಗಾಗಿ ಅರ್ಹತಾ ಪರೀಕ್ಷೆಯ ದಿನಾಂಕ ಮತ್ತು ಇತರೆ ಮಾಹಿತಿಯನ್ನು ಪ್ರತ್ಯೇಕವಾಗಿ ತಿಳಿಸಲಾಗುವುದು.

## ಮೇ.07ರಂದು ರಾಯಚೂರು ಜಿಲ್ಲೆಯಲ್ಲಿ ಸಿಎಂ ಪ್ರವಾಸ

ಯುವ ಮಾರ್ಗ ಸುದ್ದಿ

**ರಾಯಚೂರು,ಮೇ.6–**ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾ ಮಯ್ಯ ಅವರು ಮೇ.07ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಅಂದು ಬೆಳಿಗ್ಗೆ 10 ಗಂಟೆಗೆ ಬೆಂಗಳೂರಿನ ಹೆಚ್‌ಎಎಲ್ ವಿಮಾನ ನಿಲ್ದಾಣದಿಂದ ನಿರ್ಗಮಿಸಿ ಜಿಂದಾಲ್ ಏರಸ್ಟ್ರಿಪ್ ಮಾರ್ಗವಾಗಿ ಹೊರಟು ಬೆಳಗ್ಗೆ 11.40ಕ್ಕೆ ರಾಯಚೂರು ನಗರದಲ್ಲಿನ ಕೃಷಿ ವಿವಿಯ ಹೆಲಿಪ್ಯಾಡಗೆ ಆಗಮಿಸುವರು. ಬಳಿಕ ಜಿಲ್ಲಾ ಕ್ರೀಡಾಂಗಣದಲ್ಲಿ ಪಕ್ಷದ ಕಾರ್ಯಕ್ರಮದಲ್ಲಿ ಭಾಗಿಯಾಗುವರು.

ಮಧ್ಯಾಹ್ನ 3 ಗಂಟೆಗೆ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿ ಗಳೊಂದಿಗೆ ಚರ್ಚೆ, ಸಭೆ ನಡೆಸುವರು. ಸಂಜೆ 4 ಗಂಟೆಗೆ ರಾಯಚೂರ ಕೃಷಿ ವಿವಿಯ ಹೆಲಿಪ್ಯಾಡನಿಂದ ಬೆಂಗಳೂರಿನತ್ತ ಪ್ರಯಾಣ ಬೆಳೆಸುವರು ಎಂದು ಮುಖ್ಯಮಂತ್ರಿಗಳ ವಿಶೇಳ ಕರ್ತವ್ಯಾಧಿಕಾರಿಗಳಾದ ಕೆ.ಚಿರಂಜೀವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲಸಿಕೆ ಹಾಕಿಸಿಕೊಂಡರೂ ರೇಬೀಸ್ ಸೋಂಕು ಬಾಲಕಿ ಸಾವು

**ತಿರುವನಂತಪುರಂ,ಮೇ.5–** ಕೇರಳದಲ್ಲಿ ಮತ್ತೊಂದು ರೇಬೀಸ್ ಸಾವು ಸಂಭವಿಸಿದೆ .ತಿರುವನಂತಪುರಂನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಏಳು ವರ್ಷದ ಬಾಲಕಿ ಸಾವನ್ನಪ್ಪಿದ್ದಾಳೆ. ಕೊಲ್ಲಂನ ಪತ್ತನಪುರಂನ ವಿಲಕ್ಕುಡಿ ಜಾಸ್ಮಿನ್ ಮಂಜಿಲ್ ನಿವಾಸಿ ನಿಯಾ ಫೈಸಲ್ ಮೃತಪಟ್ಟ ಬಾಲಕಿ.ಏಪ್ರಿಲ್ 28 ರಂದು ರೇಬೀಸ್ ಇರುವುದು ದೃಢಪಟ್ಟದೆ.

ಬಾಲಕಿಯನ್ನು ನಾಲ್ಕು ದಿನಗಳ ಹಿಂದೆ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಏಪ್ರಿಲ್ 8 ರಂದು ಬಾಲಕಿ ಅಂಗಳದಲ್ಲಿ ಆಟವಾಡುತ್ತಿದ್ದಾಗ ಬೀದಿ ನಾಯಿ ಕಚ್ಚಿದೆ.ಬಾತುಕೋಳಿಯನ್ನು ಬೆನ್ನಟ್ಟಿದ್ದ ಬೀದಿ ನಾಯಿ ಮಗುವಿನ ಮೇಲೆ ದಾಳಿ ಮಾಡಿದೆ. ನಂತರ ಮೂರು ಡೋಸ್ ಲಸಿಕೆ ಪಡೆದಿದ್ದರೂ, ಮಗುವಿಗೆ ರೇಬೀಸ್ ಸೋಂಕು ತಗುಲಿದೆ. ಕಳೆದ ಒಂದು ತಿಂಗಳಲ್ಲಿ ರಾಜ್ಯದಲ್ಲಿ ಮೂವರು ಮಕ್ಕಳು ಸೇರಿದಂತೆ ಏಳು ಜನರು ರೇಬೀಸ್‌ನಿಂದ ಸಾವನ್ನಪ್ಪಿದ್ದಾರೆ. ನರವನ್ನು ಕಚ್ಚಿದ ನಂತರ ರೇಬೀಸ್ ವೈರಸ್ ರಕ್ತಪ್ರವಾಹದ ಮೂಲಕ ಮೆದುಳಿಗೆ ಪ್ರವೇಶಿಸಿದೆ ಎಂದು ಆಸ್ಪತ್ರೆ ಅಧಿಕಾರಿಗಳು ತಿಳಿಸಿದ್ದಾರೆ. ಸಾರ್ವಜನಿಕ ಆರೋಗ್ಯ ನಿರ್ದೇಶಕರ ನೇತೃತ್ವದಲ್ಲಿ ಘಟನೆಯ ಬಗ್ಗೆ ತನಿಖೆ ಆರಂಭಿಸಲಾಗಿದೆ.ಪತ್ತನಂತಿಟ್ಟದ ಪುಲ್ಲಾಡ್ ಮೂಲದ ಭಾಗ್ಯಲಕ್ಷ್ಮಿ (13) ಏಪ್ರಿಲ್ 9 ರಂದು ಲಸಿಕೆ ಹಾಕಿಸಿಕೊಂಡಿದ್ದರೂ ರೇಬೀಸ್ ಸೋಂಕಿಗೆ ಒಳಗಾದ ನಂತರ ಮರಣ ಸಂಭವಿಸಿದೆ.ಮಲಪ್ಪುರಂನ ತೆಂಜಿಪಾಲಂ ಮೂಲದ ಸಿಯಾ ಫಾರಿಸ್ (6) ಏಪ್ರಿಲ್ 29 ರಂದು ನಿಧನ ಹೊಂದಿದ್ದಾಳೆ.



ಡಿಸೆಂಬರ್‌ನಲ್ಲಿ ನಾಯಿ ಕಚ್ಚಿದ ನಂತರ ಕೊಝುಂಚೇರಿ ಜಿಲ್ಲಾ ಆಸ್ಪತ್ರೆಯಲ್ಲಿ ಲಸಿಕೆ ಪಡೆದ ಮೂರು ತಿಂಗಳ ನಂತರ ಭಾಗ್ಯಲಕ್ಷ್ಮಿ ಸಾವನ್ನಪ್ಪಿದ್ದಾಳೆ.ಮಗುವಿಗೆ ಕೊನೆಯದಾಗಿ ಚಿಕಿತ್ಸೆ ನೀಡಿದ ಖಾಸಗಿ ಆಸ್ಪತ್ರೆಯಿಂದ ಸಂಗ್ರಹಿಸಿದ ಮಾದರಿಗಳನ್ನು ರಾಜ್ಯ ಸಾರ್ವಜನಿಕ ಆರೋಗ್ಯ ಪ್ರಯೋಗಾಲಯದಲ್ಲಿ ಪರೀಕ್ಷಿಸಿದಾಗ ರೇಬೀಸ್ ದೃಢಪಟ್ಟಿದೆ. ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ಸಿಕ್ಕಿದ್ದರೂ, ಅವರು ಅದನ್ನು ಬಹಿರಂಗಪಡಿಸಲಿಲ್ಲ ಎಂದು ಮಗುವಿನ ಪೋಷಕರು ತಿಳಿಸಿದ್ದಾರೆ. ಆರೋಗ್ಯ ಇಲಾಖೆಯ ಪ್ರಕಾರ, 2021 ರಿಂದ ರೇಬೀಸ್ ಲಸಿಕೆ ಪಡೆದ ನಂತರ 22 ಜನರು ಸಾವನ್ನಪ್ಪಿದ್ದಾರೆ.

## ಒಂದೇ ಕುಟುಂಬದ ಐವರ ಸಜೀವ ದಹನ

**ಕಾನ್ಪುರ,ಮೇ.6:–** ಕಾನ್ಪುರದ ಪ್ರೇಮ್‌ನಗರದಲ್ಲಿರುವ ನಾಲ್ಕು ಅಂತಸ್ತಿನ ಕಟ್ಟಡದಲ್ಲಿ ಸಂಭವಿಸಿದ ಬೆಂಕಿ ಅವಘಡದಲ್ಲಿ ಗಂಡ, ಹೆಂಡತಿ ಮತ್ತು ಅವರ ಮೂವರು ಹೆಣ್ಣು ಮಕ್ಕಳು ಸೇರಿದಂತೆ ಒಂದೇ ಕುಟುಂಬದ ಐವರು ಸಜೀವ ದಹನಗೊಂಡಿದ್ದಾರೆ. 8 ಗಂಟೆಗಳ ಕಾಲ ನಡೆದ ಪರಿಹಾರ ಕಾರ್ಯಾಚರಣೆ ಎಲ್ಲಾ ಶವಗಳನ್ನು ಹೊರ ತೆಗೆಯಲಾಗಿದೆ.ಮೃತರನ್ನು ನಜ್ಮಿ ಸಬಾ (42) ಮೊಹಮ್ಮದ್ ಡ್ಯಾನಿಶ್ (45) ಮತ್ತು ಅವರ ಮಕ್ಕಳಾದ ಸಾರಾ (15), ಸಿಮ್ರಾ (12), ಇನಾಯಾ (7) ಎಂದು ಗುರುತಿಸಲಾಗಿದೆ.

ಭಾನುವಾರ ತಡರಾತ್ರಿ ಈ ಬಾರಿ ಬೆಂಕಿ ಅವಘಡ ಸಂಭವಿಸಿದೆ.ಸ್ಫೋಟದಿಂದಾಗಿ ಮನೆಗಳು ಬಿರುಕು ಬಿಟ್ಟಿವೆ ಎಂದು ಪ್ರತ್ಯೇಕ ದರ್ಶಿಗಳು ತಿಳಿಸಿದ್ದಾರೆ.ಈ ಮೊದಲು ಕಟ್ಟಡದಲ್ಲಿ ಮೂವರು ಸಿಲುಕಿಕೊಂಡಿದ್ದಾರೆ ಎಂದು ಅವರು ಹೇಳಲಾಗಿತ್ತು .ಆದರೆ ಈಗ ಕಟ್ಟಡದಲ್ಲಿ ಸಿಲುಕಿದ್ದ ಕುಟುಂಬದ ಐವರು ಸದಸ್ಯರು ಸಾವನ್ನಪ್ಪಿದ್ದಾರೆ ಎಂದು ಪೊಲಿಸರು ತಿಳಿಸಿದ್ದಾರೆ.

ಮಾಹಿತಿಯ ಪ್ರಕಾರ, ಕಟ್ಟಡದ ಕೆಳಗಿನ ಮಹಡಿಯಲ್ಲಿ ಶೂ ಕಾರ್ಖಾನೆ ಇದ್ದು, ಮೇಲಿನ ಮಹಡಿಯಲ್ಲಿ ಜನರು ವಾಸಿಸುತ್ತಿದ್ದರು. ಶಾರ್ಟ್ ಸರ್ಕ್ಯೂಟ್‌ನಿಂದಾಗಿ ಬೆಂಕಿ ಹೊತ್ತಿಕೊಂಡಿದ್ದು, ಕ್ಷಣಾರ್ಧದಲ್ಲಿ ಇಡೀ ಕಟ್ಟಡ ಆವರಿಸಿದೆ ಎಂದು ಹೇಳಲಾಗುತ್ತಿದೆ. ಪೊಲೀಸರು ಮತ್ತು ಅಗ್ನಿಶಾಮಕ ದಳದ ಅಧಿಕಾರಿಗಳು ಸ್ಥಳದಲ್ಲಿದ್ದು, ರಕ್ಷಣಾ ಕಾರ್ಯಾಚರಣೆಯನ್ನು ಮೇಲ್ವಿಚಾರಣೆ ಮಾಡುತ್ತಿದ್ದಾರೆ.

ರಕ್ಷಣಾ ಕಾರ್ಯಾಚರಣೆಯನ್ನು ಚುರುಕುಗೊಳಿಸಲು ಲಕ್ನೋದಿಂದ ಎಸ್‌ಡ್ರಿಎಫ್ ತಂಡವನ್ನು ಸಹ ಕರೆಯಿಸಲಾಗಿದೆ. ಈ ಅಪಘಾತದ ಬಗ್ಗೆ ಮಾಹಿತಿ ಪಡೆದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಜಿಲ್ಲಾಡಳಿತ ಮತ್ತು ಅಗ್ನಿಶಾಮಕ ದಳದ ತಂಡಕ್ಕೆ ತಕ್ಷಣ ಸ್ಥಳಕ್ಕೆ ತಲುಪಿ ಪರಿಹಾರ ಕಾರ್ಯಗಳನ್ನು ಚುರುಕುಗೊಳಿಸುವಂತೆ ನಿರ್ದೇಶನ ನೀಡಿದ್ದಾರೆ .



ಪ್ರೇಮ್‌ನಗರದ ಮೊಹಮ್ಮದ್ ಡ್ಯಾನಿಶ್, ಸೇನೆಗೆ ಶೂ ಸರಬರಾಜು ಮಾಡುತ್ತಿದ್ದು. ನಾಲ್ಕು ಅಂತಸ್ತಿನ ಕಟ್ಟಡದ ಮೊದಲ ಮತ್ತು ಎರಡನೇ ಮಹಡಿಗಳಲ್ಲಿ ಶೂ–ಚಪ್ಪಲಿ ತಯಾರಿಕಾ ಕಾರ್ಖಾನೆ ಕಾರ್ಯನಿರ್ವಹಿಸುತ್ತಿದೆ. ಡ್ಯಾನಿಶ್ ಮತ್ತು ಅವನ ಸಹೋದರ ಖಾಸಿಮ್ ಮೂರನೇ ಮತ್ತು ನಾಲ್ಕನೇ ಮಹಡಿಗಳಲ್ಲಿ ವಾಸಿಸುತ್ತಿದ್ದಾರೆ. ಭಾನುವಾರ ಕಾರ್ಖಾನೆ ಮುಚ್ಚಲಾಗಿತ್ತು ಎನ್ನಲಾಗಿದೆ.

## ಹೊಂಡದಲ್ಲಿ ಮುಳುಗಿ ಮೂವರು ಬಾಲಕರ ದುರ್ಮರಣ



**ಯಾದಗಿರಿ,ಮೇ.6 :** ನೀರು ಕುಡಿಯಲು ಹೋಗಿದ್ದ ಮೂವರು ಬಾಲಕರು ಹೊಂಡದಲ್ಲಿ ಮುಳುಗಿ ದುರ್ಮರಣ ಹೊಂದಿರುವ ಘಟನೆ ತಾಲೂಕಿನ ಅಚೊಲಾ ತಾಂಡಾದಲ್ಲಿ ನಡೆದಿದೆ. ಕುರಿ ಕಾಯಲು ಹೋಗಿದ್ದ ಬಾಲಕರು ಬೇಸಿಗೆ ಹಿನ್ನಲೆ ನೀರಿನ ದಾಹ ತಣಿಸಿಕೊಳ್ಳಲು ಕೃಷಿ ಹೊಂಡದ ಬಳಿ ಹೋಗಿದ್ದರು ಈ ವೇಳೆ ಕಾಲುಜಾರಿ ಬಿದ್ದು ನೀರುಪಾಲು ಆಗಿರಬಹುದು ಎನ್ನಲಾಗಿ ದೆ. ಅಚೊಲಾ ತಾಂಡಾದ ನಿವಾಸಿಗಳಾದ ಅಮರ್(12), ಜಯ(14), ಕೃಷ್ಣ 10) ಮೃತ ದುರ್ದೈವಿಗಳು ಎಂದು ಗುರುತಿಸಲಾಗಿದೆ. ಯಾದಗಿರಿ ಗ್ರಾಮೀಣ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು, ಪೊಲೀಸರು ಪರಿಶೀಲನೆ ನಡೆಸಿದ್ದಾರೆ.ಮಕ್ಕಳ ಸಾವಿನ ಸುದ್ದಿ ತಿಳಿದ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿತ್ತು.

ಯುವ ಮಾರ್ಗ

ಮಂಗಳವಾರ: 06-05-2025

# ವಿಶ್ವದ ಅತಿ ದೊಡ್ಡ ಎಲೆಕ್ಟ್ರಿಕ್ ಹಡಗು ಲೋಕಾರ್ಪಣೆ



**ಸಿಡ್ನಿ,ಮೇ6–** ಆಸ್ಟ್ರೇಲಿಯಾದಲ್ಲಿ ಅತಿ ದೊಡ್ಡ ಎಲೆಕ್ಟ್ರಿಕ್ ಹಡಗು ಹಲ್ 096 ಲೋಕಾರ್ಪಣೆಯಾಗಿದೆ. ಈ ಹಡಗು ಸುಮಾರು 2,100 ಪ್ರಯಾಣಿಕರು ಮತ್ತು 225 ವಾಹನಗಳಿಗೆ ಸ್ಥಳಾವಕಾಶ ಕಲ್ಪಿಸುತ್ತದೆ. ಆಸ್ಟ್ರೇಲಿಯಾದ ದೋಣಿ ತಯಾರಕರೊಬ್ಬರು ವಿಶ್ವದ ಅತಿದೊಡ್ಡ ಬ್ಯಾಟರಿ ಚಾಲಿತ ಹಡಗು ಹಲ್ 096 ಅನ್ನು ಪ್ರಾರಂಭಿಸಿದ್ದಾರೆ. ಟ್ಯಾನಿಯನ್ ತಯಾರಕ ಇನ್ಕ್ಯಾಟ್ ನಿರ್ಮಿಸಿದ ಇದು 130 ಮೀಟರ್ ಅಳತೆ ಹೊಂದಿದೆ.

ಕಳೆದ ಶುಕ್ರವಾರ ಹೋಬರ್ಟ್‌ನಲ್ಲಿ ಬಿಡುಗಡೆಯಾದ ಹಲ್ 096 ಚೀನಾ ಜೊರಿಲ್ಲಾ ಆಗಿ ಕಾರ್ಯನಿರ್ವಹಿಸಲಿದ್ದು, ಸುಮಾರು 2,100 ಪ್ರಯಾಣಿಕರು ಮತ್ತು 225 ವಾಹನಗಳಿಗೆ ಸ್ಥಳಾವಕಾಶ ಕಲ್ಪಿಸುತ್ತದೆ. ಇದಕ್ಕೆ ಉರುಗ್ವೆಯ ಚಲನಚಿತ್ರ ಮತ್ತು ರಂಗಭೂಮಿ ತಾರೆಯ ಹೆಸರನ್ನು ಇಡಲಾಗಿದೆ.

ಬ್ಯಾಟರಿ ಚಾಲಿತ ವಾಹನ ದೋಣಿ ಉರುಗ್ವೆ ನಗರ, ಮಾಂಟೆವಿಡಿಯೊ. ಇತರ ಎರಡು ಉರುಗ್ವೆ ಪಟ್ಟಣಗಳು ಮತ್ತು ಅರ್ಜೆಂಟೀನಾದ ರಾಜಧಾನಿ ಬ್ಯೂನಸ್ ಐರಿಸ್ ನಡುವೆ ಪ್ರಯಾಣಿಸಲಿದೆ ಎಂದು ದಿ ಗಾರ್ಡಿಯನ್ ವರದಿ ಮಾಡಿದೆ. ಹಡಗಿನ ಒಳಾಂಗಣವು ಅಪೂರ್ಣವಾಗಿದೆ, ಆದರೆ ಇದು 2,300 ಚದರ ಮೀಟರ್ ಸುಂಕ–ಮುಕ್ತ ಚಿಲ್ಲರೆ ಶಾಪಿಂಗ್ ಡೆಕ್ ಅನ್ನು ಹೊಂದಿರುತ್ತದೆ, ಇದು ಸರಿಸುಮಾರು 100 ಸಾಮಾನ್ಯ ಆಸ್ಟ್ರೇಲಿಯಾದ ಮನೆಗಳ ಗಾತ್ರವಾಗಿದೆ.

ಹಲ್ 096 250 ಟನ್ ಗಿಂತ ಹೆಚ್ಚು ಬ್ಯಾಟರಿಗಳನ್ನು ಹೊಂದಿದೆ ಮತ್ತು ಪ್ರಸ್ತುತ 40 ಮೆಗಾವ್ಯಾಟ್ ಗಂಟೆಗಳಿಗಿಂತ ಹೆಚ್ಚಿನ ಸಾಮರ್ಥ್ಯವನ್ನು ಹೊಂದಿರುವ ಶಕ್ತಿ ಶೇಖರಣಾ ವ್ಯವಸ್ಥೆಯನ್ನು (ಇಎಸ್ಎಸ್) ಹೊಂದಿದೆ. ಇಎಸ್ ಹಿಂದಿನ ಯಾವುದೇ ಎಂದಿಗಿಂತ ನಾಲ್ಕು ಪಟ್ಟು ದೊಡ್ಡದಾಗಿದೆ.

# ಬೆಂಗಳೂರು ಅತ್ಯಂತ ದುಬಾರಿ ನಗರ



**ಬೆಂಗಳೂರು,ಮೇ.6–**ಭಾರತದಲ್ಲಿ ಜೀವನ ವೆಚ್ಚ ಹೆಚ್ಚುತ್ತಿರುವ ಬಗ್ಗೆ ಐಐಟಿ ಬಾಂಬೆ ಪದವೀಧರರೊಬ್ಬರು ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ, ಇದು ಸಣ್ಣ ಪಟ್ಟಣಗಳನ್ನು ಸಹ ಬಿಟ್ಟಿಲ್ಲ ಎಂದು ಹೇಳಿದ್ದಾರೆ.ಬೆಂಗಳೂರಿನ ನಿವಾಸಿ ಮೊನಾಲಿ ದಂಬ್ರೆ ಅವರು ಸಾಮಾಜಿಕ ಮಾಧ್ಯಮ ವೇದಿಕೆಯಲ್ಲಿ ತಮ್ಮ ಆತಂಕ ವ್ಯಕ್ತಪಡಿಸಿದ್ದಾರೆ.

ಸಾಮಾಜಿಕ ಜಾಲತಾಣ ಈ ಪೋಸ್ಟ್ ವೈರಲ್ ಆಗುತ್ತಿದೆ. ಈ ಪೋಸ್ಟ್‌ನಲ್ಲಿ ಮೊನಾಲಿ ಬೆಂಗಳೂರು ಭಾರತದ ಅತ್ಯಂತ ದುಬಾರಿ ನಗರ ಎಂದು ಹೇಳಿದ್ದಾರೆ. ಈ ಪೋಸ್ಟ್ ಬೆಂಗಳೂರಿನ ಹಣದುಬ್ಬರವನ್ನು ಪುಣೆ, ಅಹಮದಾಬಾದ್, ಮುಂಬೈ, ಹೈದರಾಬಾದ್ ಮತ್ತು ಕೋಲ್ಕತ್ತಾದಂತಹ ನಗರಗಳೊಂದಿಗೆ ಹೋಲಿಸಿದೆ ಮತ್ತು ಜೀವನ ವೆಚ್ಚ, ಬಾಡಿಗೆ, ಆಹಾರ ಮತ್ತು ಪ್ರಯಾಣ ವೆಚ್ಚ ಇಲ್ಲಿ ಅತ್ಯಧಿಕವಾಗಿದೆ ಎಂದು ತೋರಿಸಿದೆ.ಮುಂಬರುವ ವರ್ಷಗಳಲ್ಲಿ ಮಧ್ಯಮ ಮತ್ತು ಕೆಳವರ್ಗದವರು ಹೇಗೆ ಬದುಕುಳಿಯುತ್ತಾರೆ ಎಂಬುದರ ಬಗ್ಗೆ ಅವರು ತೀವ್ರ ಚಿಂತಿಸುವಂತಾಗಿದೆ ಎಂದಿದ್ದಾರೆ. ತನ್ನ ವೈಯಕ್ತಿಕ ಅನುಭವದ ಪ್ರಕಾರ, ಬೆಂಗಳೂರಿನಲ್ಲಿ ತನ್ನ ದಿನಸಿ ಬಿಲ್‌ಗಳು ಗಗನಕ್ಕೇರುತ್ತಿವೆ ಇದು ಕೇವಲ ದಿನನಿತ್ಯದ ಅಗತ್ಯ ಸಾಮಗ್ರಿಗಳ ಬಿಲ್ ಇದರಲ್ಲಿ ಅಲಂಕಾರಿಕ ಐಷಾರಾಮಿ ವಸ್ತುಗಳು ಸೇರಿಲ್ಲ ಎಂದು ಹೇಳಿದ್ದಾರೆ.

ಭಾರತದಲ್ಲಿ ಜೀವನ ವೆಚ್ಚ ತುಂಬಾ ದುಬಾರಿಯಾಗುತ್ತಿದೆ ಎಂಬ ಅಂಶವನ್ನು ನಾನು ನಿಧಾನವಾಗಿ ಒಪ್ಪಿಕೊಳ್ಳುತ್ತಿದ್ದೇನೆ ಸಣ್ಣ, ಟೈಯರ್ –3 ನಗರಗಳಲ್ಲಿಯೂ ಸಹ ಎಂದು ಅವರು ಬರೆದಿದ್ದಾರೆ.ಅವರ ಪೋಸ್ಟ್ ಭಾರತದಲ್ಲಿನ ಜೀವನ ಮತ್ತು ಜೀವನ ವೆಚ್ಚದ ಬಗ್ಗೆ ಚರ್ಚೆಯನ್ನು ಹುಟ್ಟುಹಾಕಿದೆ.ಅವರು ಬೆಂಗಳೂರಿನಲ್ಲಿ ದುಬಾರಿ ಬಾಡಿಗೆಯ ಬಗ್ಗೆಯೂ ಮಾತನಾಡಿ ಆಹಾರ, ಜೀವನ ಎಲ್ಲವೂ ದುಬಾರಿಯಾಗಿದೆ ಎಂದಿದ್ದಾರೆ.ಬೆಂಗಳೂರಿನಲ್ಲಿ ಹೆಚ್ಚಿನ ಜನರು ಬರುತ್ತಿರುವುದರಿಂದ ಮತ್ತು ಬೇಡಿಕೆ ಹೆಚ್ಚಾದಂತೆ ಬೆಲೆಗಳು ಸಹ ಏರುತ್ತಿವೆ ಎಂದು ಇತರ ಕೆಲವು ಬಳಕೆದಾರರು ಹೇಳಿದ್ದಾರೆ.ಕೆಲವರು ಬೆಂಗಳೂರು ದುಬಾರಿ ಎಂದು ಪರಿಗಣಿಸಿದರೆ, ಇನ್ನು ಕೆಲವರು ಇತರ ನಗರಗಳಿಗಿಂತ ಅಗ್ಗವೆಂದು ಪರಿಗಣಿಸುತ್ತಾರೆ. ಬೆಂಗಳೂರು ಒಂದು ದೊಡ್ಡ ಐಟಿ ಕೇಂದ್ರವಾಗಿದ್ದು, ಅಲ್ಲಿ ಹಲವು ಉದ್ಯೋಗಾವಕಾಶಗಳಿವೆ ಮತ್ತು ಇಲ್ಲಿನ ಹವಾಮಾನ ಮತ್ತು ಜೀವನಶೈಲಿಯೂ ಜನರನ್ನು ಆಕರ್ಷಿಸುತ್ತದೆ, ಇದರಿಂದಾಗಿ ಬೆಲೆಗಳು ಹೆಚ್ಚಾಗುತ್ತವೆ.ಇದೀಗ ಬೆಂಗಳೂರು ನಿಜವಾಗಿಯೂ ಅತ್ಯಂತ ದುಬಾರಿ ನಗರವೇ ಎಂದು ಜನರು ಆಶ್ಚರ್ಯ ಪಡುತ್ತಿದ್ದಾರೆ.

# ಜನಗಣತಿ ಜೊತೆ ಜಾತಿಗಣತಿಗೆ ಪ್ರಿಯಾಂಕಾ ಗಾಂಧಿ ಸ್ವಾಗತ

**ವಯನಾಡ್, ಮೇ 6:** ಮುಂದಿನ ಜನಗಣತಿಯಲ್ಲಿ ಜಾತಿ ಗಣತಿಯನ್ನು ಪಾರದರ್ಶಕವಾಗಿ ಸೇರಿಸಲಾಗುವುದು ಎಂಬ ಕೇಂದ್ರದ ಇತ್ತೀಚಿನ ಘೋಷಣೆಯನ್ನು ವಯನಾಡ್ ನ ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ ಸ್ವಾಗತಿಸಿದ್ದಾರೆ.

ತಮ್ಮ ಕ್ಷೇತ್ರಕ್ಕೆ ಎರಡು ದಿನಗಳ ಭೇಟಿಯಲ್ಲಿರುವ ಕಾಂಗ್ರೆಸ್ ನಾಯಕಿ ಕೇಂದ್ರ ಸರ್ಕಾರದ ಈ



ನಿರ್ಧಾರವು ಬಲವಾದ ಸಾರ್ವಜನಿಕ ಬೇಡಿಕೆ ಮತ್ತು ಈ ಉದ್ದೇಶವನ್ನು ಬೆಂಬಲಿಸಿದವರ ನಿರಂತರ ಪ್ರಯತ್ನಗಳನ್ನು ಅನುಸರಿಸಿದೆ ಎಂದು ಹೇಳಿದರು.ನನ್ನ ಸಹೋದರ (ರಾಹುಲ್ ಗಾಂಧಿ) ಕಳೆದ ವರ್ಷ ಈ ವಿಷಯವನ್ನು ಕೈಗೆತ್ತಿಕೊಂಡರು ಮತ್ತು ಬಿಜೆಪಿ ಇದನ್ನು ಬಲವಾಗಿ ವಿರೋಧಿಸುತ್ತಿದ್ದರೂ ಅದರ ಪರವಾಗಿ ಮಾತನಾಡುತ್ತಲೇ ಇದ್ದರು ಎಂದು ಅವರು ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದರು.

ಈ ವಿಷಯದ ಬಗ್ಗೆ ದೃಢವಾಗಿ ನಿಂತಿದ್ದಕ್ಕಾಗಿ ಸಂಸತ್ತಿನಲ್ಲಿ ಅವರನ್ನು ಅಪಹಾಸ್ಯ ಮಾಡಲಾಯಿತು ಎಂದು ಅವರು ಹೇಳಿದರು. ದೇಶಾದ್ಯಂತದ ಜನರ ಒತ್ತಡವು ವ್ಯತ್ಯಾಸವನ್ನುಂಟು ಮಾಡಿದೆ ಎಂದು ಪ್ರಿಯಾಂಕಾ ಗಾಂಧಿ ಹೇಳಿದರು.ನಿಖರವಾದ ದತ್ತಾಂಶವನ್ನು ಸಂಗ್ರಹಿಸುವ ಮೂಲಕ ಸರ್ಕಾರವು ಜಾತಿ ಸಮೀಕ್ಷೆಯನ್ನು ಸರಿಯಾಗಿ ನಡೆಸುತ್ತದೆ ಎಂದು ಅವರು ಭರವಸೆ ವ್ಯಕ್ತಪಡಿಸಿದರು.

# ರಾಜ್ಯ ಸರ್ಕಾರಕ್ಕೆ ವಿಜಯೇಂದ್ರ ಎಚ್ಚರಿಕೆ




**ಬೆಂಗಳೂರು,ಮೇ6:** ಕರಾವಳಿ ಪ್ರದೇಶದಲ್ಲಿ ಜನಪ್ರತಿನಿಧಿಗಳಿಗೇ ರಕ್ಷಣೆ ಇಲ್ಲದ ಪರಿಸ್ಥಿತಿ ನಿರ್ಮಾಣವಾಗುತ್ತಿದೆ, ಪೊಲೀಸರ ನಡೆ, ಸರ್ಕಾರದ ಧೋರಣೆ ಇದೇ ರೀತಿ ಮುಂದುವರೆದರೆ ಬಿಜೆಪಿ ಸರ್ಕಾರದ ಜನಪರವಾದ ಹೋರಾಟ ಮತ್ತಷ್ಟು ತೀವ್ರಸ್ವರೂಪ ಪಡೆಯಲಿದೆ ಎಂದು ಸರ್ಕಾರಕ್ಕೆ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ ವಿಜಯೇಂದ್ರ ನೇರ ಎಚ್ಚರಿಕೆ ಕೊಟ್ಟಿದ್ದಾರೆ.

ಬೆಳ್ತಂಗಡಿ ಶಾಸಕ ಹರೀಶ್ ಪೂಂಜಾ ಅವರು ತೆಕ್ಕಾರು ಗೋಪಾಲಕೃಷ್ಣ ದೇವಸ್ಥಾನ ಹಾಗೂ ಬ್ರಹ್ಮಕಲಶೋತ್ಸವದ ಕುರಿತು ಭಾವುಕವಾಗಿ ಮಾತನಾಡಿರುವುದನ್ನೇ ಆಧರಿಸಿ ನೀಡಲಾಗಿರುವ ದೂರಿಗೆ ಎಫ್ಐಆರ್ ದಾಖಲಿಸಲಾಗಿದೆ.ಈ ಮೂಲಕ ಸರ್ಕಾರ ಯಾರ ಪರ ಇದೆ ಎನ್ನುವುದು ಸ್ಪಷ್ಟವಾಗುತ್ತಿದೆ ಎಂದು ವಿಜಯೇಂದ್ರ ಅವರು ತಮ್ಮ ಅಧಿಕೃತ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. ನಾಡಿನ ಕರಾವಳಿ ಪ್ರದೇಶದಲ್ಲಿ ಹಿಂದೂಗಳಿಗೆ ಆತಂಕ, ದುಗುಡ ತಪ್ಪುತ್ತಿಲ್ಲ.

ಮಂಗಳೂರಿನ ನಮ್ಮ ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿ ಕಗ್ಗೊಲೆಯ ಪ್ರಕರಣ ದಕ್ಷಿಣ ಕನ್ನಡ ಜಿಲ್ಲೆಯ ಜನತೆಯನ್ನು ದಿಗ್ಭ್ರಮೆಗೊಳಿಸಿದೆ, ರಾಜ್ಯದ ಜನರು ಮತೀಯ ಶಕ್ತಿಗಳ ಅಟ್ಟಹಾಸದಿಂದ ಆತಂಕದಲ್ಲಿದ್ದಾರೆ. ಇದರ ನಡುವೆಯೇ ಮತ್ತೊಬ್ಬ ಹಿಂದೂ ಕಾರ್ಯಕರ್ತ ಭರತ್ ಕುಮೇಲು ಅವರಿಗೆ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮೂಲಕ ಜೀವ ಬೆದರಿಕೆ ಹಾಕಿದ್ದಾರೆ ಎಂದು ಕಿಡಿಕಾರಿದ್ದಾರೆ.

ಕಾಂಗ್ರೆಸ್ ಸರ್ಕಾರ ಮಾತ್ರ ತನ್ನ ನೈತಿಕ ಜವಾಬ್ದಾರಿಯನ್ನು ಮರೆತು ವರ್ತಿಸುತ್ತಿದೆ. ಕಾನೂನು ಸುವ್ಯವಸ್ಥೆಯನ್ನು ಹತೋಟಿಗೆ ತೆಗೆದುಕೊಳ್ಳಲು ಯಾವುದೇ ಕಾನೂನು ಕ್ರಮಕ್ಕೆ ಮುಂದಾಗುತ್ತಿಲ್ಲ, ಗೃಹ ಇಲಾಖೆ ಸಂಪೂರ್ಣ ನಿಷ್ಕ್ರಿಯವಾಗುವಂತೆ ಕಾಣದ ಪ್ರಭಾವಿ ಕೈ ಗಳು ಕೆಲಸ ಮಾಡುತ್ತಿರುವುದು ಸುಹಾಸ್ ಕೊಲೆ ಹಾಗೂ ನಂತರದ ಬೆದರಿಕೆಗಳ ಪ್ರಕರಣಗಳಿಂದ ಸ್ಪಷ್ಟವಾಗುತ್ತಿದೆ ಎಂದು ವಿಜಯೇಂದ್ರ ಸರ್ಕಾರದ ಮೇಲೆ ತೀವ್ರ ವಾಗ್ದಾಳಿ ನಡೆಸಿದ್ದಾರೆ.

# ಪಾಕ್‌ಗೆ ನೀರಿನ ಹರಿವು ಸ್ಥಗಿತಗೊಳಿಸಿದ ಭಾರತ



**ನವದೆಹಲಿ, ಮೇ. 6–** ಜಮ್ಮು–ಕಾಶ್ಮೀರದ ಪೆಹಲ್ಗಾಮ್‌ನಲ್ಲಿ ಉಗ್ರರ ದಾಳಿ ಬಳಿಕ ಪಾಕಿಸ್ತಾನ ಜತೆಗಿನ ಸಿಂಧೂನದಿ ಒಪ್ಪಂದವನ್ನು ರದ್ದು ಮಾಡಿರುವ ಭಾರತ ಪಾಕಿಸ್ತಾನಕ್ಕೆ ನೀರಿನ ಹರಿವನ್ನು ಸ್ಥಗಿತಗೊಳಿಸಿದೆ.

ಭಾರತವು ಚೆನಾಬ್ ನದಿಯ ಬಾಕ್ಲಿಹಾರ್ ಜಲಾಶಯದ ಮೂಲಕ ಪಾಕಿಸ್ತಾನಕ್ಕೆ ನೀರಿನ ಹರಿವನ್ನು ಸ್ಥಗಿತಗೊಳಿಸಿದೆ ಎಂದು ಅಧಿಕೃತ ಮೂಲಗಳು ಹೇಳಿವೆ.ಭಾರತ ಝಿಲಂ ನದಿಯ ಕಿಶನ್ ಗಂಗಾ ಜಲಾಶಯದಿಂದಲೂ ಪಾಕಿಸ್ತಾನಕ್ಕೆ ಹರಿಯುವ ನೀರನ್ನು ಸ್ಥಗಿತಗೊಳಿಸಲು ಚಿಂತನೆ ನಡೆಸಿದೆ ಎಂದು ಮೂಲಗಳು ಹೇಳಿವೆ.

ಜಮ್ಮುವಿನ ರಾಮ್‌ಬನ್‌ನಲ್ಲಿರುವ ಪಾತ್ರಿಹಾರ್ ಮತ್ತು ಉತ್ತರ ಕಾಶ್ಮೀರದ ಕಿಶನ್ ಗಂಗಾ ಪಾಕಿಸ್ತಾನಕ್ಕೆ ನೀರು ಬಿಡುಗಡೆ ಮಾಡುವುದನ್ನು ನಿಯಂತ್ರಿಸುವ ಸಾಮರ್ಥ್ಯ ಹೊಂದಿದ್ದು, ಪೆಹಲ್ಗಾಮ್ ಘಟನೆ ನಂತರ ಭಾರತ ಪಾಕಿಸ್ತಾನಕ್ಕೆ ನೀರು ಹರಿಯುವುದನ್ನು ಸ್ಥಗಿತಗೊಳಿಸುವ ಕಾರ್ಯಕ್ಕೆಈಗ ಅಧಿಕೃತವಾಗಿ ಚಾಲನೆ ನೀಡಿದೆ.ವಿಶ್ವಬ್ಯಾಂಕ್ ಮಧ್ಯಸ್ಥಿಕೆಯಲ್ಲಿ 1960 ರಲ್ಲಿ ಭಾರತ ಮತ್ತು ಪಾಕ್ ನಡುವೆ ಸಿಂಧೂ ಜಲ ಒಪ್ಪಂದ ಆಗಿತ್ತು. ಅದರಂತೆ ಭಾರತ ಇದು ವರೆಗೂ ಪಾಕಿಸ್ತಾನಕ್ಕೆ ಬಾಕ್ಲಿಂಹಾರ್ ಮತ್ತು ಕಿಶನ್ ಗಂಗಾ ಅಣೆಕಟ್ಟಿನಿಂದ ನೀರನ್ನು ಹರಿಸುವ ಕೆಲಸ ಮಾಡುತಿತ್ತು.ಪೆಹಲ್ಗಾಮ್ ಘಟನೆ ನಂತರ ಭಾರತ ಸಿಂಧೂ ನದಿ ಒಪ್ಪಂದವನ್ನು ರದ್ದು ಮಾಡಿದ್ದು, ಪಾಕಿಸ್ತಾನಕ್ಕೆ ನೀರಿ ಹರಿಸುವುದನ್ನು ಸ್ಥಗಿತಗೊಳಿಸಿದೆ. ಈ ಮೂಲಕ ಪಾಕಿಸ್ತಾನ ಬೆಂಬಲಿತ ಉಗ್ರರ ದಾಳಿಗೆ ಭಾರತ ಪ್ರತಿಕಾರ ಕೈಗೊಂಡಿದೆ.

# ಕಿಸಾನ್ ಸಮ್ಮಾನ್ ಯೋಜನೆಯ 20ನೇ ಕಂತು ಜೂನ್‌ನಲ್ಲಿ ಬಿಡುಗಡೆ..?

**ನವದೆಹಲಿ, ಮೇ6–**ಪ್ರಧಾನಮಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯ 20ನೇ ಕಂತು ಜೂನ್‌ನಲ್ಲಿ ಬಿಡುಗಡೆಯಾಗುವ ಸಾಧ್ಯತೆ ಇದೆ. 19ನೇ ಕಂತು ಫೆಬ್ರವರಿಯಲ್ಲಿ ಬಿಡುಗಡೆಯಾಗಿತ್ತು. ಫೆಬ್ರವರಿಯಿಂದ ಜೂನ್ ವರೆಗೆ 4 ತಿಂಗಳು. ಇದರಿಂದಾಗಿ, 20ನೇ ಕಂತಿನ ಹಣ ಜೂನ್ ತಿಂಗಳಿನಲ್ಲಿ ರೈತರ ಖಾತೆಗೆ ಜಮಾವಣೆಯಾಗಬಹುದು.

ಕೆವೈಸಿ ಮಾಡದಿದ್ದರೆ ಕಂತಿನ ಹಣ ಸಿಗುವುದಿಲ್ಲ ಎಂದು ಸರ್ಕಾರ ಹೇಳಿದೆ. ಅನೇಕ ರೈತರು ಇದನ್ನು ಮಾಡುವುದಿಲ್ಲ. ಪರಿಣಾಮವಾಗಿ, ಈ ರೈತರಿಗೆ ಕಂತು ಪಾವತಿಗಳು ಸ್ಥಗಿತಗೊಳ್ಳುತ್ತವೆ. ಭೂ ಪರಿಶೀಲನಾ ಕಾರ್ಯವೂ ಪೂರ್ಣಗೊಳ್ಳಬೇಕು. ಇದಲ್ಲದೆ, ಆಧಾರ್ ಕಾರ್ಡ್ ಅನ್ನು ಬ್ಯಾಂಕ್ ಖಾತೆಗೆ ಲಿಂಕ್ ಮಾಡದಿದ್ದರೂ ಸಹ, ಯೋಜನೆಯ ಪ್ರಯೋಜನಗಳು ಲಭ್ಯವಿರುವುದಿಲ್ಲ.ಹೆಚ್ಚುವರಿಯಾಗಿ, ನೋಂದಣಿ ಸಮಯದಲ್ಲಿ ತಪ್ಪಾದ ಮಾಹಿತಿಯನ್ನು ಒದಗಿಸಿದರೆ, ಕಂತು ಪಾವತಿಗಳನ್ನು ತಡೆಹಿಡಿಯಬಹುದು. ಈ ಕಾರ್ಯಗಳು ಪೂರ್ಣಗೊಳ್ಳದಿದ್ದರೆ, ಯೋಜನೆಯ ಕಂತು ಪಾವತಿಗಳು ಸ್ಥಗಿತಗೊಳ್ಳುತ್ತವೆ.

ಪ್ರಸ್ತುತ, ದೇಶದಲ್ಲಿ ಕೋಟ್ಯಂತರ ಗ್ರಾಹಕರು ಈ ಯೋಜನೆಯ ಲಾಭವನ್ನು ಪಡೆಯುತ್ತಿದ್ದಾರೆ. ಪರಿಣಾಮವಾಗಿ, ನೀವು ಕೆವೈಸಿ ಮಾಡದಿದ್ದರೆ, ಸಾಧ್ಯವಾದಷ್ಟು ಬೇಗ ಅದನ್ನು ಮಾಡಲು ಸೂಚಿಸಲಾಗುತ್ತದೆ.ರೈತರು ಮೊದಲು ಪಿಎಂ ಕಿಸಾನ್ ಸಮ್ಮಾನ್ ನಿಧಿ ಯೋಜನೆಯ ಅಧಿಕೃತ ವೆಬ್‌ಸೈಟ್‌ಗೆ ಭೇಟಿ ನೀಡಬೇಕು. ಇದಾದ ನಂತರ, ನೀವು ಮುಖಪುಟದಲ್ಲಿರುವ ರೈತರ ವಿಭಾಗವಾದ ರೈತ ಕಾನರ್‌ಗೆ ಹೋಗಬೇಕು. ನಂತರ ನೀವು ಈ ಕೆವೈಸಿ ಆಯ್ಕೆಯ ಮೇಲೆ ಕ್ಲಿಕ್ ಮಾಡಬೇಕಾಗುತ್ತದೆ. ಅದರ ನಂತರ, ನೀವು ನಿಮ್ಮ 12–ಅಂಕಿಯ ಆಧಾರ್ ಸಂಖ್ಯೆಯನ್ನು ನಮೂದಿಸಿ ಹುಡುಕಾಟ ಮೇಲೆ ಕ್ಲಿಕ್ ಮಾಡಬೇಕಾಗುತ್ತದೆ.

ಈಗ, ನಿಮ್ಮ ಬ್ಯಾಂಕ್ ಖಾತೆಗೆ ಲಿಂಕ್ ಮಾಡಲಾದ ಮೊಬೈಲ್ ಸಂಖ್ಯೆಯನ್ನು ನಮೂದಿಸಿ ಮತ್ತು ಗೆಟ್ ಮೊಬೈಲ್ ಒಟಿಪಿ ಆಯ್ಕೆಯ ಮೇಲೆ ಕ್ಲಿಕ್ ಮಾಡಿ. ಅದರ ನಂತರ, ನೀವು ಆಧಾರ್‌ಗೆ



ಲಿಂಕ್ ಮಾಡಲಾದ ಮೊಬೈಲ್ ಸಂಖ್ಯೆಗೆ ಸ್ವೀಕರಿಸಿದ ಒಟಿಪಿಅನ್ನು ನಮೂದಿಸಬೇಕು ಮತ್ತು ಸಲ್ಲಿಸು ಬಟನ್ ಅನ್ನು ಕ್ಲಿಕ್ ಮಾಡಬೇಕು.

ರೈತರು ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯ ಪ್ರಯೋಜನಗಳನ್ನು ಪಡೆಯುವ ಮೂಲಕ ತಮ್ಮ ಸಣ್ಣ ಪ್ರಮಾಣದ ಕೃಷಿ ಅಗತ್ಯಗಳನ್ನು ಪೂರೈಸಿಕೊಳ್ಳಬಹುದು. ಪ್ರತಿ ವರ್ಷ ನೀಡಲಾಗುವ 6,000 ರೂ.ಗಳನ್ನು ಮೂರು ಕಂತುಗಳಲ್ಲಿ ನೀಡಲಾಗುತ್ತದೆ. ಅಂದರೆ ಪ್ರತಿ ಕಂತಿನಲ್ಲಿ ರೂ. 2,000 ಗಳನ್ನು ರೈತರ ಬ್ಯಾಂಕ್ ಖಾತೆಗಳಿಗೆ ಕಳುಹಿಸಲಾಗುತ್ತದೆ. ಈ ಯೋಜನೆಯಡಿಯಲ್ಲಿ ಇಲ್ಲಿಯವರೆಗೆ 19 ಕಂತುಗಳನ್ನು ವಿತರಿಸಲಾಗಿದೆ. ರೈತರು ಈಗ 20ನೇ ಕಂತಿಗಾಗಿ ಕಾಯುತ್ತಿದ್ದಾರೆ.

ದೇಶದ ರೈತರಿಗೆ ಆರ್ಥಿಕ ನೆರವು ನೀಡಲು ಕೇಂದ್ರ ಸರ್ಕಾರ ಹಲವು ಅತ್ಯುತ್ತಮ ಯೋಜನೆಗಳನ್ನು ಆರಂಭಿಸಿದೆ. ಇವುಗಳಲ್ಲಿ ಅತ್ಯಂತ ಜನಪ್ರಿಯ ಯೋಜನೆ ಎಂದರೆ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ. ಈ ಯೋಜನೆಯನ್ನು ಕೇಂದ್ರ ಸರ್ಕಾರವು 2019 ರಲ್ಲಿ ಪ್ರಾರಂಭಿಸಿತು. ಈ ಯೋಜನೆಯಡಿಯಲ್ಲಿ, ರೂ. ಪ್ರತಿ ವರ್ಷ 6,000 ರೂಪಾಯಿಗಳನ್ನು ರೈತರ ಖಾತೆಗಳಿಗೆ ನೇರವಾಗಿ ಜಮಾ ಮಾಡಲಾಗುತ್ತದೆ.

# ಕಾಯಕದ ಮಹತ್ವವನ್ನು ಅರಿತವರೆಲ್ಲರು ಶರಣರಾದರು : ವಿರತೀಶಾನಂದ ಸ್ವಾಮಿಗಳು

ಯುವ ಮಾರ್ಗ ಸುದ್ದಿ



**ಮಾನ್ವಿ,ಮೇ.6–** ಬಸವಣ್ಣನವರಿಂದ 12 ನೇ ಶತಮಾನದಲ್ಲಿ ಕಾಯಕದ ಮಹತ್ವವನ್ನು ಅರಿತವರೆಲ್ಲರು ಶರಣರಾದರು ಬಸವಣ್ಣನವರು ಅಂದು ಎಲ್ಲರನ್ನು ಸಮಾನವಾಗಿ ಕಂಡು ಸರ್ವರಿಗೂ ಸಮಾನತೆಯ ತತ್ವ ಭೋದಿಸಿ ಸಮ ಸಮಾಜ ನಿರ್ಮಾಣಮಾಡಿದರು ಎಂದು ಮನಗೂಳಿ ವಿರಕ್ತ ಮಠದ ವಿರತೀಶಾನಂದ ಸ್ವಾಮಿಗಳು ತಿಳಿಸಿದರು.

ಪಟ್ಟಣದ ಈಶ್ವರ ದೇವಸ್ಥಾನದ ಅವರಣದಲ್ಲಿ ತಾ. ಬಸವಕೇಂದ್ರ, ಮಹಿಳಾ ಬಸವ ಕೇಂದ್ರ ಮತ್ತು ಯುವ ಬಸವ ಕೇಂದ್ರ ವತಿಯಿಂದ ಹಮ್ಮಿಕೊಂಡಿದ್ದ ಸಾಂಸ್ಕೃತಿಕ ನಾಯಕ ಬಸವಣ್ಣನವರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ವಿಶ್ವಗುರು ಬಸವಣ್ಣನವರು ಸಮಾಜದಲ್ಲಿ ತುಳಿತಕ್ಕೆ ಒಳಗಾದ ಜನರನ್ನು ಮೇಲಕ್ಕೆತ್ತಿ ಅವರಿಗೆ ಸಮಾಜದಲ್ಲಿ ಉತ್ತಮ ಸ್ಥಾನ ನೀಡಿದರು ಹಸಿದು ಬಂದ ಜನರಿಗೆ ಮಹಾಮನೆಯ ಮೂಲಕ ಅನ್ನ, ಶಿಕ್ಷಣ ಮತ್ತು ಕಾಯಕ ಕಲಿಸಿಕೊಟ್ಟರು ಎಂದು ತಿಳಿಸಿದರು.

ಹೊಸಪೇಟೆಯ ಶರಣ ಸಾಹಿತಿ ಬಸವಕಿರಣ ಮಾತನಾಡಿ ಬಸವಣನವರು ಅನುಭವ ಮಂಟಪದಲ್ಲಿ ಮಹಿಳೆಯರಿಗೆ ಉನ್ನತ ಸ್ಥಾನವನ್ನು ನೀಡಿದರಿಂದಲ್ಲೇ ಅನೇಕ ವಚನಕಾರ್ತಿಯರ ವಚನಗಳನ್ನು ನಾವು ಇಂದು ಕಾಣುವುದಕ್ಕೆ ಸಾಧ್ಯವಾಗಿದೆ ಎಂದು ತಿಳಿಸಿದರು.

ರಾಯಚೂರು ಕಲಾ ತಂಡದಿಂದ ಶಿವಶರಣ ಕಂಬಳಿ ನಾಗೀದೇವ ನಾಟಕ ಪ್ರದರ್ಶನ ನಡೆಯಿತು. ಪಟ್ಟಣದ ಬಸವ ವೃತ್ತದಿಂದ ಈಶ್ವರ ದೇವಸ್ಥಾನದ ಅವರಣದ ವರೆಗೆ ವಿಶ್ವಗುರು ಬಸವಣ್ಣನವರ ಭಾವಚಿತ್ರ ಮತ್ತು ನೀರಮಾನ್ವಿ ಬಸವ ಸೈನ್ಯ ಮಕ್ಕಳಿಂದ ವಚನ ಕಟ್ಟುಗಳ ಮೆರವಣಿಗೆ ನಡೆಯಿತು.


ಕಾರ್ಯಕ್ರಮದಲ್ಲಿ ಬಸವ ಕೇಂದ್ರದ ಗೌರವಾಧ್ಯಕ್ಷ ಡಾ. ಬಸವಪ್ರಭು ಪಾಟೀಲ್ ,ಬಸವಕೇಂದ್ರದ ತಾ. ಅಧ್ಯಕ್ಷ ಜಿ.ಎಂ. ರಂಗಪ್ಪ, ಮಹಿಳಾ ಬಸವ ಕೇಂದ್ರದ ಅಧ್ಯಕ್ಷೆ ಜಯಲಕ್ಷ್ಮೀ ಪಾಟೀಲ್, ಯುವ ಬಸವ ಕೇಂದ್ರ ಅಧ್ಯಕ್ಷ ಕುಮಾರಸ್ವಾಮಿ ಮೇದಾ, ದೇವೇಂದ್ರ ದುರ್ಗದ್, ಅಮರೇಶಪ್ಪ ಗವಿಗಟ್ಟು, ಶೇಖರಪ್ಪ ವಕೀಲರು, ವೀರನಗೌಡ ಪೋತ್ನಾಳ, ಗುಮ್ಮ ಬಸವರಾಜ, ಶರಣಪ್ಪ ಕುಂಬಾರ, ಅಮರೇಶ ಹಡಪದ, ಲಕ್ಷ್ಮಣ ಜಾನೇಕಲ್, ಮಹ್ಮದ್ ಮುಜೀಬ್, ಅಮರೇಶಪ್ಪ ಅಲ್ದಾಳ, ಸೂಗಪ್ಪಗೌಡ ಹರವಿ, ಸೇರಿದಂತೆ ಇನ್ನತರರು ಇದ್ದರು.



ಮಾನ್ವಿ: ನೀರಮಾನ್ವಿ ಬಸವ ಸೈನ್ಯ ಮಕ್ಕಳಿಂದ ವಚನ ಕಟ್ಟುಗಳ ಮೆರವಣಿಗೆ ನಡೆಯಿತು.

# ಕಲ್ಮಠ ಪದವಿ ಮಹಾವಿದ್ಯಾಲಯದ ವತಿಯಿಂದ ಎನ್‌ಎಸ್‌ಎಸ್ ಕಾರ್ಯಕ್ರಮ

ಯುವ ಮಾರ್ಗ ಸುದ್ದಿ



**ಮಾನ್ವಿ,ಮೇ.6–** ತಾಲೂಕಿನ ಸದಾಪುರ ಗ್ರಾಮದಲ್ಲಿ ಕಲ್ಮಠ ಪದವಿ ಮಹಾವಿದ್ಯಾಲಯದ ವತಿಯಿಂದ ನಡೆದ ರಾಷ್ಟ್ರೀಯ ಸೇವಾ ಯೋಜನೆ ವಿಶೇಳ ಶಿಬಿರಕ್ಕೆ ಕಲ್ಮಠದ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಎಸ್.ಎಸ್.ಪಾಟೀಲ್ ಚಾಲನೆ ನೀಡಿ ಮಾತನಾಡಿ ಕಾಲೇಜಿನ ವಿದ್ಯಾರ್ಥಿಗಳು ಎನ್.ಎಸ್.ಎಸ್. ವಿಶೇಷ ಶಿಬಿರದಲ್ಲಿ ಭಾಗವಹಿಸುವುದರಿಂದ ಗ್ರಾಮೀಣ ಭಾಗದ ಜನರ ಜೀವನವನ್ನು ಹತ್ತಿರದಿಂದ ನೋಡುವುದಕ್ಕೆ ಸಾಧ್ಯವಾಗುತ್ತದೆ ಹಾಗೂ ಗ್ರಾಮೀಣ ಜನರ ಜೀವನ ಸುಧಾರಣೆಗಾಗಿ ಯೋಜನೆಗಳನ್ನು ರೂಪಿಸುವುದಕ್ಕೆ ಹಾಗೂ ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳುವುದಕ್ಕೆ ಸಾಧ್ಯವಾಗುತ್ತದೆ ವಿದ್ಯಾರ್ಥಿಗಳು ಗ್ರಾಮದ ಜನರಿಗೆ ಶಿಕ್ಷಣದಿಂದ ಮಾತ್ರ ಅಭಿವೃದ್ಧಿ ಸಾಧ್ಯ ಎಂದು ಮನವರಿಕೆ ಮಾಡಿಕೊಡಿ ಎಂದು ತಿಳಿಸಿದರು.

ಡಿ.ಎಡ್. ಕಾಲೇಜಿನ ಪ್ರಾಚಾರ್ಯ ಸಿದ್ದಮಲ್ಲಯ್ಯನವರು ಮಾತನಾಡಿದರು ಧ್ವಜಾರೋಹಣವನ್ನು ಸತ್ಯನಾರಾಯಣ ಗೌಡ ಪೊಲೀಸ್ ಪಾಟೀಲ್ ಸದಾಪುರ ಹಾಗೂ ಶ್ರಮದಾನದ ಉದ್ಘಾಟನೆಯನ್ನು ತಿಮ್ಮಪ್ಪ ನಾಯಕ ಗ್ರಾಮ ಪಂಚಾಯತಿ ಅಧ್ಯಕ್ಷರು ಸದಾಪುರ ಇವರು ನೆರವೇರಿಸಿದರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಲ್ಮಠ ಕಾಲೇಜಿನ ಪ್ರಾಚಾರ್ಯರಾದ ಸಿದ್ದನಗೌಡ ಪಾಟೀಲ್ ವಹಿಸಿದರು.

ಸದಾಪುರಶಾಲೆಯ ಮುಖ್ಯಗುರು ಯಮನಪ್ಪ ಶರಣಮ್ಮ ಉಪನ್ಯಾಸಕರು ಕಾರ್ಯಕ್ರಮ ಅಧಿಕಾರಿ ಆನಂದ ಉಪ್ಪಲ್ ಇದ್ದರು.

# ದುಡಿಯೋಣ ಬಾ ಅಭಿಯಾನಕ್ಕೆ ಚಾಲನೆ

**ಕೋಲಾರ, ಮೇ 6–**ಗ್ರಾಮೀಣ ಭಾಗದ ಜನರ ಅನುಕೂಲಕ್ಕಾಗಿ ನರೇಗಾ ಯೋಜನೆ ಒಂದು ವರದಾನವಾಗಿದ್ದು, ಸಿಇಓ ಪ್ರವೀಣ್ ಪಿ ಬಾಗೇವಾಡಿ ರವರು "ದುಡಿಯೋಣ ಬಾ" ಅಭಿಯಾನದ ಪ್ರಚಾರಕ್ಕೆ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು. ಚಾಲನೆ ನೀಡಿದ ನಂತರ ಮಾತನಾಡಿದ ಅವರು ಮಾನ್ಯ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಮತ್ತು ಪಂಚಾಯತ್ ರಾಜ್ ಇಲಾಖೆ ಆದೇಶದಂತೆ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಇದೇ ಮೇ ತಿಂಗಳ ಒಂದನೇ ತಾರೀಖಿನಿಂದ ಗ್ರಾಮೀಣ ಭಾಗದ ಕೂಲಿಕಾರರಿಗೆ 100 ದಿನಗಳ ಅಕುಶಲ ಕೆಲಸವನ್ನು ಒದಗಿಸುವ ಸಲುವಾಗಿ ವಿಶೇಷ "ದುಡಿಯೋಣ ಬಾ" ಅಭಿಯಾನದ ಪ್ರಚಾರವನ್ನು ಕೈಗೊಳ್ಳಲಾಗಿದೆ. ಹಾಗಾಗಿ ಜಿಲ್ಲೆಯ 2025–26 ನೇ ಸಾಲಿನಲ್ಲಿ ಎಲ್ಲಾ ಅರ್ಹ ಕೂಲಿಕಾರರಿಗೆ ಕನಿಷ 100 ದಿನಗಳಿಗೆ ಸರಾಸರಿ 379 ರೂಗಳ ಕೂಲಿಯನ್ನು ನೀಡಿ ವಲಸೆಯನ್ನು ತಪ್ಪಿಸುವುದು ಈ ಅಭಿಯಾನದ ಗುರಿಯಾಗಿದೆ ಎಂದರು

# ಭದ್ರತಾ ಪಡೆಗಳ ಕಾರ್ಯಾಚರಣೆ ಟಿಫನ್ ಬಾಕ್ಸ್‌ನಲ್ಲಿ ಐಇಡಿ ಪತ್ತೆ

**ನವದೆಹಲಿ,ಮೇ.6–** ಪಹಲ್ಗಾಮ್ ದಾಳಿಯ ಕೆಲ ದಿನಗಳ ನಂತರ ಜಮ್ಮು ಕಾಶ್ಮೀರದಲ್ಲಿ ಭಯೋತ್ಪಾದಕರ ಅಡಗುತಾಣವನ್ನು ಭೇದಿಸಿರುವ ಭದ್ರತಾ ಪಡೆಗಳು 3 ಟಿಫಿನ್ ಬಾಕ್ಸ್ ಮತ್ತು ಎರಡು ಬಕೆಟ್ ನಲ್ಲಿ ಬಚ್ಚಿಟ್ಟಿದ್ದ ಸುಧಾರಿತ ಸ್ಫೋಟಕಗಳನ್ನು ಪತ್ತೆ ಹಚ್ಚುವ ಮೂಲಕ ಮುಂದಾಗಬಹುದಾಗಿದ್ದ ಭಾರಿ ಅನಾಹುತ ತಡೆಯುವಲ್ಲಿ ಯಶಸ್ವಿಯಾಗಿವೆ.

ಸೇನೆ ಮತ್ತು ಜಮ್ಮು ಮತ್ತು ಕಾಶ್ಮೀರ ಪೊಲೀಸರು ಪೂಂಚ್‌ನ ಅರಣ್ಯದ ಸುರನ್‌ಕೋಟೆ ಪ್ರದೇಶದಲ್ಲಿ ನಡೆಸಿದ ಜಂಟಿ ಕಾರ್ಯಾಚರಣೆಯಲ್ಲಿ, ಭಯೋತ್ಪಾದಕರ ಅಡಗುತಾಣವನ್ನು ಪತ್ತೆಹಚ್ಚಿದ್ದು ಈ ವೇಳೆ ಸುಧಾರಿತ ಸ್ಫೋಟಕ ಸಾಧನಗಳು ಮತ್ತು ಸಂವಹನ ಸಾಧನಗಳನ್ನು ವಶಪಡಿಸಿಕೊಂಡಿದ್ದಾರೆ. ಪಹಲ್ಗಾಮ್‌ನಲ್ಲಿ 26 ಜನರನ್ನು ಹತ್ಯೆಗೈದ ಬೆನ್ನಲ್ಲೇ ಭದ್ರತಾ ಪಡೆಗಳು ಭರ್ಜರಿ ಕಾರ್ಯಾಚರಣೆ ನಡೆಸಿವೆ.

ಜಮ್ಮು ಮತ್ತು ಕಾಶ್ಮೀರ ಪೊಲೀಸರು ಪೂಂಚ್‌ನ ಸುರನ್‌ಕೋಟೆಯ ಅರಣ್ಯ ಪ್ರದೇಶದಲ್ಲಿ ಅಡಗುತಾಣವನ್ನು ಪತ್ತೆಹಚ್ಚಿದ್ದು ಮೂರು ಟಿಫಿನ್ ಬಾಕ್ಸ್‌ಗಳಲ್ಲಿ ಮತ್ತು ಎರಡು ಸ್ಟೀಲ್ ಬಕೆಟ್‌ಗಳಲ್ಲಿ ಅಡಗಿಸಿಟ್ಟಿದ್ದ ಸ್ಫೋಟಕ ವಶಪಡಿಸಿಕೊಳ್ಳಲಾಗಿದೆ. ಇದರ ಜೊತೆಗೆ ಭದ್ರತಾ ಪಡೆಗಳು ಸ್ಥಳದಿಂದವಸಂವಹನ ಸಾಧನಗಳು ಮತ್ತು ಇತರ ಅಪಾಯಕಾರಿ ವಸ್ತುಗಳನ್ನು ವಶಪಡಿಸಿಕೊಂಡಿವೆ. ಕಣಿವೆಯಾದ್ಯಂತ ದೊಡ್ಡ ಪ್ರಮಾಣದ ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಗಳನ್ನು ಪ್ರಾರಂಭಿಸಿದ್ದು ಶಂಕಿತ ಅಡಗುತಾಣಗಳ ಮೇಲೆ ದಾಳಿ ಮಾಡಿದ್ದಾರೆ, ಭಯೋತ್ಪಾದಕರು ಬಳಸಿದ ಆಶ್ರಯಗಳನ್ನು ಕೆಡವಿದ್ದಾರೆ ಮತ್ತು ನೂರಾರು ಭಯೋತ್ಪಾದಕ ಸಹಚರರನ್ನು ವಿಚಾರಣೆಗಾಗಿ ವಶಕ್ಕೆ ಪಡೆದಿದ್ದಾರೆ ಎಂದು ಹಿರಿಯ ಅಧಿಕಾರಿಗಳು ತಿಳಿಸಿದ್ದಾರೆ.

ಭಯೋತ್ಪಾದಕರ ಬೆಂಬಲಿಗರನ್ನು ಗುರಿಯಾಗಿಸಿಕೊಂಡು ಜಮ್ಮು ಮತ್ತು ಕಾಶ್ಮೀರದಾದ್ಯಂತ ಹಲವಾರು ಕಾರ್ಯಾಚರಣೆಗಳಲ್ಲಿ ಪೂಂಚ್‌ನಲ್ಲಿ ಕಾರ್ಯಾಚರಣೆಯನ್ನು ನಡೆಸಲಾಗುತ್ತಿದೆ. ಭಯೋತ್ಪಾದನೆಯನ್ನು ನಾಶಪಡಿಸುವ ಗುರಿಯೊಂದಿಗೆ ಜಂಟಿ ಕಾರ್ಯಾಚರಣೆ ನಡೆದಿದೆ.

ಏಪ್ರಿಲ್ 22 ರಂದು, ಅನಂತನಾಗ್ ಜಿಲ್ಲೆಯ ಪಹಲ್ಗಾಮ್ ಬಳಿಯ ಜನಪ್ರಿಯ ಪ್ರವಾಸಿ ತಾಣವಾದ ಬೈಸರನ್‌ನಲ್ಲಿ ಭಯೋತ್ಪಾದಕರು ಗುಂಡಿನ ದಾಳಿ ನಡೆಸಿ 26 ಜನರನ್ನು ಹತ್ಯೆ ಮಾಡಿದ್ದರು.ಈ ದಾಳಿಯ ಭಾರತ ಮತ್ತು ಪಾಕಿಸ್ತಾನದ ನಡುವಿನ ಉದ್ವಿಗ್ನತೆಯನ್ನು ಹೆಚ್ಚಿಸಿದೆ, ಹಿಂಸಾಚಾರಕ್ಕೆ ಗಡಿಯಾಚೆಗಿನ ಅಂಶಗಳನ್ನು ದೂಷಿಸಿದೆ. ದಾಳಿಯನ್ನು ತೀವ್ರವಾಗಿ ಖಂಡಿಸಿರುವ ಪ್ರಧಾನಿ ನರೇಂದ್ರ ಮೋದಿ, ಪ್ರತೀಕಾರ ತೀರಿಸುವುದಾಗಿ ಗುಡುಗಿದ ನಂತರ ಈ ಕಾರ್ಯಾಚರಣೆ ನಡೆದಿದೆ."ಹಂತಕರನ್ನು ಭೂಮಿಯ ಕೊನೆಯವರೆಗೂ ಹಿಂಬಾಲಿಸಲಾಗುತ್ತದೆ" ಎಂದು ಅವರು ದಾಳಿಯ ನಂತರ ಹೇಳಿಕೆಯಲ್ಲಿ ತಿಳಿಸಿದ್ದಾರೆ.



## ವಿಶ್ವಸಂಸ್ಥೆ ಯಿಂದ ಗೌಪ್ಯ ಸಭೆ

ಭಾರತ ಮತ್ತು ಪಾಕಿಸ್ತಾನ ನಡುವಿನ ಪರಿಸ್ಥಿತಿಯ ಕುರಿತು ವಿಶ್ವಸಂಸ್ಥೆಯ ಭದ್ರತಾ ಮಂಡಳಿಯು ಇಂದು ಗೋಪ್ಯ ಸಭೆ ನಡೆಸಲಿದೆ. ತುರ್ತು ಸಮಾಲೋಚನೆಗೆ ಪಾಕಿಸ್ತಾನದ ಮನವಿ ಮೇರೆಗೆ ಭದ್ರತಾ ಮಂಡಳಿ ಈ ಕ್ರಮಕ್ಕೆ ಮುಂದಾಗಿದ್ದು ಪಾಕಿಸ್ತಾನ ಪ್ರಸ್ತುತ 15 ರಾಷ್ಟ್ರಗಳ ಭದ್ರತಾ ಮಂಡಳಿಯ ಶಾಶ್ವತವಲ್ಲದ ಸದಸ್ಯ ದೇಶವಾಗಿದ್ದು, ಮೇ ತಿಂಗಳಲ್ಲಿ ಗ್ರೀಸ್ ಅಧ್ಯಕ್ಷತೆ ವಹಿಸಿದೆ.

ಚೀನಾ, ಫ್ರಾನ್ಸ್, ರಷ್ಯಾ, ಬ್ರಿಟನ್ ಮತ್ತು ಅಮೆರಿಕ ವಿಟೋ ಅಧಿಕಾರವಿರುವ ಭದ್ರತಾ ಮಂಡಳಿಯ ಶಾಶ್ವತ ಸದಸ್ಯ ರಾಷ್ಟ್ರಗಳಾದರೆ, ಅಲ್ಜೀರಿಯಾ, ಡೆನ್ಮಾರ್ಕ್, ಗ್ರೀಸ್, ಗಯಾನಾ, ಪಾಕಿಸ್ತಾನ, ಪನಾಮ, ದಕ್ಷಿಣ ಕೊರಿಯಾ, ಸಿಯೆರಾ ಲಿಯೋನ್, ಸ್ಲೊವೇನಿಯಾ ಮತ್ತು ಸೊಮಾಲಿಯಾ. ಶಾಶ್ವತ ಸದಸ್ಯರಲ್ಲದ ರಾಷ್ಟ್ರಗಳಾಗಿವೆ.

ಪಹಲ್ಗಾಮ್ ದಾಳಿ ಬಳಿಕ ಪರಮಾಣು ಸಾಮರ್ಥ್ಯ ಹೊಂದಿರುವ ಭಾರತ ಮತ್ತು ಪಾಕಿಸ್ತಾನದ ನಡುವೆ ಉಲ್ಬಣಗೊಂಡಿರುವ ಉದ್ವಿಗ್ನತೆ ಶಮನಕ್ಕೆ ಸಭೆ ನಡೆಸಲು ಮನವಿ ಬಂದರೆ ಆ ಬಗ್ಗೆ ಕ್ರಮ ಕೈಗೊಳ್ಳಲಾಗುವುದು ಎಂದು ವಿಶ್ವಸಂಸ್ಥೆಗೆ ಗ್ರೀಸ್‌ನ ಶಾಶ್ವತ ಪ್ರತಿನಿಧಿ ಮತ್ತು ಮೇ ತಿಂಗಳ ಭದ್ರತಾ ಮಂಡಳಿ ಅಧ್ಯಕ್ಷ ಎವಂಗಿಲೋಸ್ ಸೆಕೆರಿಸ್ ಹೇಳಿದ್ದರು.

ಭಾರತವು ಪಾಕಿಸ್ತಾನದ ಗಡಿಯಾಚೆಗಿನ ಭಯೋತ್ಪಾದನೆಯಿಂದ ಬಳಲಿದ್ದು, ಈ ಬಗ್ಗೆ ಕ್ರಮ ಜರುಗಿಸಬೇಕಲ್ಲವೇ? ಎಂಬ ಪ್ರಶ್ನೆಗೂ ಉತ್ತರಿಸಿದ್ದ ಅವರು, ಇದು ಈಗ ಪ್ರಸ್ತುತ ಪ್ರಶ್ನೆಯಾಗಿದೆ ಎಂದು ಹೇಳಿದ್ದರು.ಪಹಲ್ಗಾಮ್‌ನಲ್ಲಿ ನಡೆದ ಘೋರ ಭಯೋತ್ಪಾದಕ ದಾಳಿಯನ್ನು ನಾವು ಬಲವಾಗಿ ಖಂಡಿಸುತ್ತೇವೆ ಎಂದಿದ್ದರು.


## ಪುರಸಭೆ ಕಾರ್ಯಾಲಯ,ಮಾನವಿ 584123

ತಾಲೂಕ:ಮಾನವಿ ಜಿಲ್ಲೆ:ರಾಯಚೂರು

email: itstaffulbmanvi@yahoo.com Ph: 08538-220700

ಸಂಖ್ಯೆ: ಪುಸಮಾ/ತಂತ್ರಿಕ.ಶಾಖೆ/ಗಣಕ.ವಾ. ನಿರ್ವಹಣೆ/2025–26 ದಿನಾಂಕ: 05–05–2025

–:: ಅಲ್ಪಾವದಿ ಕೋಟೇಷನ್ ಪ್ರಕಟಣೆ ::–

ಈ ಮೂಲಕ ಸ್ಥಳೀಯ ಉದ್ದಿಮೆದಾರರಿಗೆ/ಸರಬರಾಜುದಾರರಿಗೆ ತಿಳಿಯಪಡಿಸುವುದೆನೆಂದರೆ ಪುರಸಭೆಯ ಕಛೇರಿಯ ಕೆಲಸಗಳಿಗೆ ಬಳಸುವ ಗಣಕಯಂತ್ರಗಳ ಮತ್ತು ಪ್ರಿಂಟರ್ಸ್ ಮತ್ತು ಇತರೆ ಸಾಮಾಗ್ರಿಗಳ ವಾರ್ಷಿಕ ನಿರ್ವಹಣೆ ಒಪ್ಪಂದ(AMC)ಯನ್ನು ಮಾಡಲು ಧರಪಟ್ಟಿ ಪ್ರಕಟಣೆಯನ್ನು ಹೊರಡಿಸಿದ್ದು ಆಸಕ್ತಿವುಳ್ಳ ಸ್ಥಳೀಯ ಉದ್ದಿಮೇದಾರರು/ಸರಬರಾಜುದಾರರು ತಮ್ಮ–ತಮ್ಮ ಧರಪಟ್ಟಿಯನ್ನು ನಿಗದಿತ ನಮೂನೆಯಲ್ಲಿ ಭರ್ತಿಮಾಡಿ ಮುಚ್ಚಿದ ಲಕೋಟೆಯಲ್ಲಿ

ದಿನಾಂಕ:15–05–2025 ರಂದು ಮಧ್ಯಾಹ್ನ 02–00 ಗಂಟೆ ಒಳಗಾಗಿ ಮಾನ್ಯ ಮುಖ್ಯಾಧಿಕಾರಿಗಳು ಪುರಸಭೆ ಇವರಿಗೆ ಕಛೇರಿ ಅವಧಿಯಲ್ಲಿ ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಕಾರ್ಯಾಲಯದ ಮಾಹಿತಿ ತಂತ್ರಜ್ಞನವರಿಗೆ ಕಛೇರಿಯ ಸಮಯದಲ್ಲಿ ಸಂಪರ್ಕಿಸತಕ್ಕದು

ಪ್ರತಿಗಳನ್ನು:–

1. ಮಾನವಿ ಪುರಸಭೆ ಕರ್ಯಾಲಯ ನೊಟೀಸ್ ಬೊರ್ಡಗೆ ಅಂಟಿಸಲಾಗಿದೆ

ಮುಖ್ಯಾಧಿಕಾರಿಗಳು

ಪುರಸಭೆ ಮಾನವಿ


# ಗೊಬ್ಬುರ (ಬಿ) ಗ್ರಾಮದಲ್ಲಿ ಡಾ. ಅಂಬೇಡ್ಕರ್ ಪ್ರತಿಮೆ ಅನಾವರಣ

**ಅಫಜಲಪುರ:** ಸಂವಿಧಾನ ಶಿಲ್ಪಿ ಬಾಬಾಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಅವರು ದೇಶದ 140 ಕೋಟಿ ಜನರ ಭವಿಷ್ಯ ಬರೆದ ಮಹಾನ್ ಮಹಾಪುರುಷ ಎಂದು ಎಐಸಿಸಿ ಅಧ್ಯಕ್ಷ ಹಾಗೂ ರಾಜ್ಯಸಭೆ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ತಿಳಿಸಿದರು.

ತಾಲ್ಲೂಕಿನ ಗೊಬ್ಬುರ (ಬಿ) ಗ್ರಾಮದಲ್ಲಿ ಶನಿವಾರ ನೂತನವಾಗಿ ಪ್ರತಿಷ್ಠಾಪಿಸಲಾದ ಡಾ. ಅಂಬೇಡ್ಕರ್ ಪ್ರತಿಮೆ ಅನಾವರಣಗೊಳಿಸಿ ಮಾತನಾಡಿದ ಅವರು, 'ಅಂಬೇಡ್ಕರ್ ಅವರು ಬರೀ ದಲಿತ ಸಮುದಾಯದವರಿಗಷ್ಟೇ ಅಲ್ಲದೇ ಎಲ್ಲರಿಗೂ ಸಮಾನ ಹಕ್ಕುಗಳನ್ನು ನೀಡಲು ಶ್ರಮಿಸಿದರು. ಅವರ ಪರಿಶ್ರಮದಿಂದಲೇ ಮಹಿಳೆಯರಿಗೂ ಮತ ಹಾಕುವ ಅಧಿಕಾರ ದೊರೆಯಿತು.

ಅವರು ರಚಿಸಿದ ರೂಪಾಯಿಯ ಸಮಸ್ಯೆಗಳು (ಪ್ರಾಬ್ಲಂ ಆಫ್ ರುಪಿ) ಎಂಬ ಕೃತಿಯಿಂದ ಪ್ರಭಾವಿತಗೊಂಡ ಬ್ರಿಟಿಷ್ ಸರ್ಕಾರ 1935ರಲ್ಲಿ ಭಾರತೀಯ ರಿಸರ್ವ್ ಬ್ಯಾಂಕ್ ಸ್ಥಾಪಿಸಿತು. ಹಿಂದೂ ಕೋಡ್ ಬಿಲ್ ಆಗಲೇ ಜಾರಿಗೆ ಬಂದಿದ್ದರೆ ಆಗಲೇ ಅಂತರ್ಜಾತಿ ವಿವಾಹಗಳು, ಸ್ತ್ರೀಯರಿಗೆ ಆಸ್ತಿಯಲ್ಲಿ ಸಮಪಾಲಿನಂತಹ ಪುರೋಗಾಮಿ ನೀತಿಗಳು ಕಾರ್ಯರೂಪಕ್ಕೆ ಬರುತ್ತಿದ್ದವು' ಎಂದು ವಿಶ್ಲೇಷಿಸಿದರು.



'ಸಂವಿಧಾನವನ್ನು ಅಂಬೇಡ್ಕರ್ ಅವರು ಒಬ್ಬರೇ ಬರೆದಿದ್ದರಾ ಎಂಬ ಕುಹಕದ ಪ್ರಶ್ನೆಗಳು ಕೇಳಿ ಬರುತ್ತಿವೆ. ಸಂವಿಧಾನ ಕರಡು ರಚನಾ ಸಮಿತಿಯ ಸದಸ್ಯರಾಗಿದ್ದ ಟಿ.ಟಿ. ಕೃಷ್ಣಮಾಚಾರಿ ಅವರು ಈ ಬಗ್ಗೆ ಪ್ರಸ್ತಾಪ ಮಾಡಿದ್ದು, ವಾಸ್ತವಾಂಶವನ್ನು ಬಹಿರಂಗಪಡಿಸಿದ್ದಾರೆ. ಏಳು ಸದಸ್ಯರ ಪೈಕಿ ಒಬ್ಬರು ಸದಸ್ಯ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಮತ್ತೊಬ್ಬರು ಅಮೆರಿಕಕ್ಕೆ ತೆರಳಿದ್ದರು. ರಾಜಮನೆತನಕ್ಕೆ ಸೇರಿದ ಮತ್ತೊಬ್ಬ ಸದಸ್ಯರು ತಮ್ಮದೇ ಕೆಲಸದಲ್ಲಿ ಮುಳುಗಿದ್ದರು. ದೆಹಲಿಯಿಂದ ದೂರವಿದ್ದ ಇನ್ನಿಬ್ಬರು ಸದಸ್ಯರು ಸಭೆಗೆ ಬರುತ್ತಲೇ ಇರಲಿಲ್ಲ. ಮತ್ತೊಬ್ಬರು ಅನಾರೋಗ್ಯದಿಂದಾಗಿ ಕರಡು ಸಂವಿಧಾನ ರಚನೆಯಲ್ಲೇ ಭಾಗವಹಿಸಲಿಲ್ಲ ಎಂದಿದ್ದಾರೆ.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**